ಸಂಪುಟ: 06 ಸಂಚಿಕೆ: 125 ಪುಟಗಳು: 08 ಶನಿವಾರ 18 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸುಖ, ಸಂತೋಷ ಸಿದ್ಧವಾಗಿ ದೊರಕುವ ಸರಕಲ್ಲ. ಅದು ನಿಮ್ಮ ಸ್ವಂತ ಶಕ್ತಿ ಮತ್ತು ಕ್ರಿಯೆಗಳಿಂದ ಸಂಪಾದಿಸುವ ಅನುಭವ.
-ದಲೈ ಲಾಮಾ

## ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಪತ್ನಿ ಚೆನ್ನಮ್ಮ ಆರೋಗ್ಯ ಸ್ಥಿತಿ ಗಂಭೀರ

• ಉದಯವಾಹಿನಿ, ಬೆಂಗಳೂರು

ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಅವರನ್ನು ನಗರದ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ತೀವ್ರ ಉಸಿರಾಟದ ತೊಂದರೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಗುರುವಾರ ರಾತ್ರಿ ಚೆನ್ನಮ್ಮ ಅವರನ್ನ ತುರ್ತು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ತಜ್ಞ ವೈದ್ಯರ ನಿಗಾದಲ್ಲಿ ಅವರಿಗೆ ಚಿಕಿತ್ಸೆ ಮುಂದುವರಿದಿದ್ದು, ಅಗತ್ಯ ವೈದ್ಯಕೀಯ ಪರೀಕ್ಷೆಗಳನ್ನೂ ನಡೆಸಲಾಗುತ್ತಿದೆ.

ವೈದ್ಯಕೀಯ ಮೂಲಗಳ ಮಾಹಿತಿ ಪ್ರಕಾರ, ಚೆನ್ನಮ್ಮ ಅವರ ಆರೋಗ್ಯ ಸದ್ಯ ಸ್ಥಿರವಾಗಿದ್ದು, ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ. ಚಿಕಿತ್ಸೆಗೆ ಉತ್ತಮವಾಗಿ ಸ್ಪಂದಿಸುತ್ತಿದ್ದು, ವೈದ್ಯರು ನಿರಂತರವಾಗಿ ಆರೋಗ್ಯದ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಅವರನ್ನು ಆಸ್ಪತ್ರೆಯಲ್ಲೇ ಇರಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿದುಬಂದಿದೆ.

## ಪೊಲೀಸ್ ಸಮವಸ್ತ್ರ ಧರಿಸಿ ರೀಲ್ಸ್, ಫೋಟೋಶೂಟ್ ಪೋಸ್ಟ್

• ಉದಯವಾಹಿನಿ, ಬೆಂಗಳೂರು

ಪೊಲೀಸ್ ಸಿಬ್ಬಂದಿ ಸಮವಸ್ತ್ರ ಧರಿಸಿ ರೀಲ್ಸ್, ಫೋಟೋ ಶೂಟ್ ಹಾಗೂ ಪ್ರೀ-ವೆಡ್ಡಿಂಗ್ ಶೂಟ್ ಮಾಡುವುದು ಹಾಗೂ ಅವುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವುದಕ್ಕೆ ನಿಷೇಧ ಹೇರುವಂತೆ ಕರ್ನಾಟಕ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರ ಶಿಫಾರಸು ಮಾಡಿದೆ. ಈ ಕುರಿತು ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಅವರಿಗೆ ಪ್ರಾಧಿಕಾರದ ಸದಸ್ಯ ಮೋಹನ್‌ಕುಮಾರ್ ದಾನಪ್ಪ ಅವರು ಪತ್ರ ಬರೆದಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಪೊಲೀಸ್ ಇಲಾಖೆಯಲ್ಲಿನ ಕೆಲವು ಅಧಿಕಾರಿಗಳು ಮತ್ತು ಸಿಬ್ಬಂದಿ ಕರ್ತವ್ಯದ ಅವಧಿಯಲ್ಲಿ ಹಾಗೂ ಇಲಾಖೆಯ ಸರ್ಕಾರಿ ವಾಹನ, ಆಯುಧಗಳನ್ನು ಬಳಸಿಕೊಂಡು ರೀಲ್ಸ್ ವಿಡಿಯೋಗಳನ್ನು ಮಾಡಿ ತಮ್ಮ ವೈಯಕ್ತಿಕ ಖಾತೆಗಳಲ್ಲಿ ಹಂಚಿಕೊಳ್ಳುತ್ತಿರುವುದಕ್ಕೆ ಸಾರ್ವಜನಿಕ ವಲಯದಿಂದ ಆಕ್ಷೇಪ ವ್ಯಕ್ತವಾಗುತ್ತಿದೆ. ಅಲ್ಲದೆ ಸಮವಸ್ತ್ರದಲ್ಲಿರುವ ಫೋಟೋಗಳನ್ನು ದುಷ್ಕರ್ಮಿಗಳು ದುರುಪಯೋಗಪಡಿಸಿಕೊಂಡು ನಕಲಿ ಖಾತೆಗಳನ್ನು ತೆರೆದು ಸಾರ್ವಜನಿಕರಿಗೆ ವಂಚಿಸುತ್ತಿರುವ ಪ್ರಕರಣಗಳೂ ವರದಿಯಾಗುತ್ತಿವೆ. ಪೊಲೀಸರು ಸಮವಸ್ತ್ರದಲ್ಲಿ ಫೋಟೋ, ರೀಲ್ಸ್ ವಿಡಿಯೋ ಮಾಡುವುದು ಹೆಚ್ಚಾಗಿ ಅಜಾಗರೂಕರತೆಯಿಂದ ಕೂಡಿದ್ದು ಕಚೇರಿ ಆವರಣಗಳು, ಸರ್ಕಾರಿ ವಾಹನಗಳು, ಆಯುಧ, ಉಪಕರಣಗಳು ಮತ್ತು ಕರ್ತವ್ಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಬಹಿರಂಗಪಡಿಸುವ ಸಾಧ್ಯತೆಯಿರುವುದರಿಂದ ಸರ್ಕಾರಿ ರಹಸ್ಯಗಳ ಅಧಿನಿಯಮ-1923ರ ಸಂಪೂರ್ಣ ಉಲ್ಲಂಘನೆ ಮಾಡಿದಂತಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಇಲಾಖೆಯ ಶಿಸ್ತು ಮತ್ತು ಘನತೆ ಕಾಪಾಡುವ ಉದ್ದೇಶದಿಂದ ಈ ಕಠಿಣ ಕ್ರಮ ಜಾರಿಗೊಳಿಸಬೇಕು ಎಂದು ಪತ್ರದಲ್ಲಿ ಮನವಿ ಮಾಡಲಾಗಿದೆ.

## ಬೆಂಗ್ಳೂರಿನ ಹಲವೆಡೆ ಮಳೆ ವಾಹನ ಸವಾರರ ಪರದಾಟ



• ಉದಯವಾಹಿನಿ, ಬೆಂಗಳೂರು

ನಗರದ ಹಲವೆಡೆ ಮಳೆ ಸುರಿಯುತ್ತಿದೆ. ಮೈಸೂರು ರಸ್ತೆ, ಟೌನ್ ಹಾಲ್, ಚಾಮರಾಜಪೇಟೆ, ಕಾರ್ಪೊರೇಷನ್, ಕೆಆರ್ ಸರ್ಕಲ್, ಕೆಆರ್ ಮಾರ್ಕೆಟ್, ಮಲ್ಲೇಶ್ವರಂ, ಶೇಷಾದ್ರಿಪುರಂ ಸೇರಿದಂತೆ ಹಲವು ಕಡೆ ಮಳೆಯಾಗುತ್ತಿದೆ. ಮಳೆ ಹಿನ್ನೆಲೆ ವಾಹನ ಸವಾರರು ಪರದಾಡಿದ್ದಾರೆ. ಮುಂದಿನ ಮೂರ್ನಾಲ್ಕು ದಿನ ಬೆಂಗಳೂರಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದಲ್ಲಿ ಮುಂದಿನ 2 ದಿನ ಮಳೆಯಾಗುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆ ರಾಜ್ಯದ ಹಲವು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಿದೆ. ಮಳೆಗಾಲದಲ್ಲಿ ಬಿಸಿಲು ಹೆಚ್ಚಾಗುತ್ತಿದ್ದು, ಬೇಸಿಗೆಯ ಅನುಭವವಾಗುತ್ತಿದೆ. ಇದರ ನಡುವೆ ಜುಲೈ 18, 19ರಂದು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ನೀಡಿದೆ. ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ ಬೆಳಗಾವಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದ್ದು, ಯೆಲ್ಲೋ ಅಲರ್ಟ್ ಘೋಷಿಸಿದೆ.

## ಬೀದಿಬದಿ ವ್ಯಾಪಾರಿಗಳು ಬಡವರು, ಅವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವುದು ಸರ್ಕಾರದ ಕರ್ತವ್ಯ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯಲ್ಲಿ ಫುಟ್‌ಪಾತ್ ಒತ್ತುವರಿ ಸಮಸ್ಯೆ ಮತ್ತು ಬೀದಿಬದಿ ವ್ಯಾಪಾರಿಗಳ ಭವಿಷ್ಯದ ಕುರಿತು ಸಚಿವ ರಾಮಲಿಂಗಾರೆಡ್ಡಿ ಮಾತನಾಡಿದ್ದಾರೆ. ಫುಟ್‌ಪಾತ್‌ಗಳು ಸಾರ್ವಜನಿಕರ ಓಡಾಟಕ್ಕಾಗಿ ಇವೆ. ಅಲ್ಲಿರುವ ವ್ಯಾಪಾರಿಗಳನ್ನು ತೆರವುಗೊಳಿಸಲು ಯಾರೂ ಆಕ್ಷೇಪಿಸುವುದಿಲ್ಲ, ಆದರೆ ಅವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವುದು ಸರ್ಕಾರದ ಜವಾಬ್ದಾರಿ ಎಂದು ಅವರು ಹೇಳಿದರು. ಹಾಕರ್ಸ್ ಝೋನ್ ವ್ಯವಸ್ಥೆ ಪ್ರಪಂಚದಾದ್ಯಂತ ಇದೆ. ಬೆಂಗಳೂರಿನಲ್ಲೂ ಈ ವ್ಯವಸ್ಥೆಯನ್ನು ಜಾರಿಗೆ ತರಬೇಕು. ಬೀದಿಬದಿ ವ್ಯಾಪಾರಿಗಳು ಬಡವರಲ್ಲಿ ಬಡವರು. ಅವರಿಗೆ ಸೂಕ್ತ ಹಾಕರ್ಸ್ ಝೋನ್ ಒದಗಿಸಿ, ಪಾದಚಾರಿಗಳಿಗೆ ಫುಟ್‌ಪಾತ್‌ಗಳನ್ನು ಬಿಟ್ಟುಕೊಡುವುದು ಸೂಕ್ತ.

ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿಯೂ ಫುಟ್‌ಪಾತ್ ವ್ಯಾಪಾರಿಗಳಿಗೆ 20,000 ರೂ. ಒನ್ ಟೈಮ್ ನೆರವು ನೀಡುವುದಾಗಿ ಭರವಸೆ ನೀಡಲಾಗಿತ್ತು ಎಂದು ರಾಮಲಿಂಗಾರೆಡ್ಡಿ ನೆನಪಿಸಿದರು.

---

ಮಧ್ಯಪ್ರಾಚ್ಯದಲ್ಲಿ ಅಮೆರಿಕ-ಇರಾನ್ ನಡುವಿನ ಸುದೀರ್ಘ ಸಂಘರ್ಷ ಜಾಗತಿಕ ಇಂಧನ ಬಿಕ್ಕಟ್ಟನ್ನು ಸೃಷ್ಟಿಸಿದೆ. ಈ ಪರಿಸ್ಥಿತಿಯಲ್ಲಿ ಜಗತ್ತಿನ ಹಲವು ಪ್ರಬಲ ರಾಷ್ಟ್ರಗಳೇ ಇಂಧನ ಅಭದ್ರತೆಯಿಂದ ತತ್ತರಿಸುತ್ತಿವೆ. ಆದರೆ ಭಾರತ ಮಾತ್ರ ಬಿಕ್ಕಟ್ಟಿನ ಸಂದರ್ಭದಲ್ಲೂ ತನ್ನ ತೈಲ ಅಗತ್ಯತೆಯನ್ನು ಖಚಿತಪಡಿಸಿಕೊಂಡಿದೆ. ಪರಿಣಾಮವಾಗಿ ಹಾರ್ಮುಜ್ ಜಲಸಂಧಿ ಅಲಭ್ಯತೆಯ ಯಾವ ಪರಿಣಾಮವೂ, ಭಾರತೀಯ ರೈಲ್ವೆ ಮೇಲೆ ಬೀರಿಲ್ಲ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಜಿಂದ್‌ನಲ್ಲಿ ದೇಶದ ಮೊದಲ ಹೈಡ್ರೋಜನ್ ರೈಲಿಗೆ ಮೋದಿ ಹಸಿರು ನಿಶಾನೆ ತೋರಿದ್ದಾರೆ.

- ದೇಶದ ಮೊದಲ ಮಾಲಿನ್ಯರಹಿತ ಜಲಜನಕ ಚಾಲಿತ ರೈಲಿಗೆ ಪ್ರಧಾನಿ ಮೋದಿ ಚಾಲನೆ
- ಜಿದ್ ಇದ್ದಿದ್ದಕ್ಕೆ ಜಿಂದ್‌ನಲ್ಲಿ ನಿಂತಿದ್ದೇವೆ.
- ಮೋದಿ ಭಾಷಣದಲ್ಲಿ ಹೈಡ್ರೋಜನ್ ಶಕ್ತಿ!
- 2014ರ ಸಂಕಲ್ಪ ಸ್ಮರಣೆ



**ಟೀ ಬೆಲೆಗಿಂತ ಹೈಡ್ರೋಜನ್ ಟ್ರೈನ್ ಟಿಕೆಟೇ ಅಗ್ಗ!...ಪ್ರಧಾನಿ ಮೋದಿ ಚಾಲನೆ ನೀಡಿದ ರೈಲಿನ ಪ್ರಯಾಣ ದರ ಕೇಳಿದ್ರೆ ಶಾಕ್..? ಆಗ್ತಿರಾ**

**ದೇಶದ ಮೊಟ್ಟಮೊದಲ ಹೈಡ್ರೋಜನ್ ರೈಲು ಉದ್ಘಾಟನೆ**

- ಜಿಂದ್ ರೈಲು ನಿಲ್ದಾಣದಲ್ಲಿ ಹೈಡ್ರೋಜನ್ ರೈಲಿಗೆ ಹಸಿರು ನಿಶಾನೆ ತೋರಿದ ಪ್ರಧಾನಿ ಮೋದಿ
- ಭಾರತೀಯ ರೈಲ್ವೆ ಸಾಮರ್ಥ್ಯ ಕೊಂಡಾಡಿದ ಪ್ರಧಾನಿ ಮೋದಿ
- ಆ.1 ರಂದು ಸಾಂಸ್ಕೃತಿಕ ನಗರಿ ಮೈಸೂರಿಗೆ ಪ್ರಧಾನಿ ಮೋದಿ ಆಗಮನ

# ಹೊಸ ರೈಲು ನಮೋ ಮೈಲಿಗಲ್ಲು

## ನೀರನ್ನಷ್ಟೇ ಹೊರಸೂಸುವ ರೈಲು!.

ಇಂಧನವಾಗಿ ಡೀಸೆಲ್ ಬಳಸುವ ಹಾಗೂ ಕಾರ್ಬನ್ ಹೊರಸೂಸುವ ಸಾಮಾನ್ಯ ರೈಲುಗಳಿಗೆ ಹೋಲಿಸಿದರೆ, ಈ ಹೈಡ್ರೋಜನ್ ಚಾಲಿತ ರೈಲು ಭಿನ್ನವಾಗಿದ್ದು, ಕೇವಲ ನೀರಾವಿಯನ್ನು ಮಾತ್ರ ಹೊರಹಾಕುತ್ತದೆ. ಹೀಗಾಗಿ ಇದು ಸಂಪೂರ್ಣವಾಗಿ ಶೂನ್ಯ-ಉದ್ವಾರದ ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆಯಾಗಿದೆ. ರೈಲಿನ ಸಂಚಾರಕ್ಕೆ ಅಗತ್ಯವಿರುವ ಗ್ರೀನ್ ಹೈಡ್ರೋಜನ್ ಅನ್ನು ಜಿಂದ್‌ನಲ್ಲಿಯೇ ಸ್ಥಾಪಿಸಲಾದ ಸುಸಜ್ಜಿತ ಘಟಕದಿಂದ ಪೂರೈಸಲಾಗುತ್ತದೆ. ಸುರಕ್ಷಿತ ಸಂಚಾರಕ್ಕಾಗಿ ಈ ಯೋಜನೆಯಲ್ಲಿ ಸುಧಾರಿತ ಸುರಕ್ಷತಾ ವೈಶಿಷ್ಟ್ಯಗಳನ್ನು ಅಳವಡಿಸಲಾಗಿದೆ. ಜರ್ಮನಿ, ಯುನೈಟೆಡ್ ಕಿಂಗ್‌ಡಮ್, ಫ್ರಾನ್ಸ್, ಇಟಲಿ ಮತ್ತು ಅಮೆರಿಕ ಸೇರಿದಂತೆ ಕೆಲವೇ ಕೆಲವು ದೇಶಗಳಲ್ಲಿ ಹೈಡ್ರೋಜನ್ ರೈಲುಗಳನ್ನು ಬಳಸಲಾಗುತ್ತಿದೆ ಅಥವಾ ಪರೀಕ್ಷಿಸಲಾಗುತ್ತಿದೆ. ಈ ಉದ್ಘಾಟನೆಯೊಂದಿಗೆ ಹೈಡ್ರೋಜನ್ ಚಾಲಿತ ರೈಲು ತಂತ್ರಜ್ಞಾನವನ್ನು ಬಳಸುತ್ತಿರುವ ವಿಶ್ವದ ಬೆರಳೆಣಿಕೆಯ ಪ್ರಮುಖ ದೇಶಗಳ ಸಾಲಿಗೆ ಭಾರತವೂ ಹೆಜ್ಜೆಯಿಟ್ಟಿದೆ. ಪಳೆಯುಳಿಕೆ ಇಂಧನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ, ಸ್ವಚ್ಛ ಸಾರಿಗೆ ವ್ಯವಸ್ಥೆಯನ್ನು ಉತ್ತೇಜಿಸುವ ಭಾರತದ ಪ್ರಯತ್ನದಲ್ಲಿ ಈ ರೈಲು ಪ್ರಮುಖ ಮೈಲಿಗಲ್ಲಾಗಿದೆ.

• ಉದಯವಾಹಿನಿ, ನವದೆಹಲಿ

ಭಾರತೀಯ ರೈಲ್ವೆ ವಲಯದಲ್ಲಿ ಇಂದು ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ಐತಿಹಾಸಿಕ ದಿನ. ಪರಿಸರಸ್ನೇಹಿ ಮತ್ತು ಮಾಲಿನ್ಯರಹಿತ ಸಾರಿಗೆಗೆ ಭಾರಿ ಉತ್ತೇಜನ ನೀಡುವ ನಿಟ್ಟಿನಲ್ಲಿ, ಭಾರತದ ಮೊಟ್ಟಮೊದಲ ಜಲಜನಕ ಚಾಲಿತ ಪ್ಯಾಸೆಂಜರ್ ರೈಲಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹರಿಯಾಣದ ಜಿಂದ್ ರೈಲು ನಿಲ್ದಾಣದಲ್ಲಿ ಹಸಿರು ನಿಶಾನೆ ತೋರಿದ್ದಾರೆ.

ಭಾರತೀಯ ರೈಲ್ವೆಯಲ್ಲಿ ಇದೇ ಮೊದಲ ಬಾರಿಗೆ ಹೈಡ್ರೋಜನ್ ಫ್ಯುಯೆಲ್ ಸೆಲ್ ತಂತ್ರಜ್ಞಾನ ಬಳಸಲಾಗುತ್ತಿದೆ. ಹೈಡ್ರೋಜನ್ ಇಂಧನ ಕೋಶಗಳ ಮೂಲಕ ವಿದ್ಯುತ್ ಉತ್ಪಾದಿಸಿ ರೈಲನ್ನು ಚಲಾಯಿಸಲಾಗುತ್ತಿದ್ದು, ಇದು ಡೀಸೆಲ್ ರೈಲುಗಳಿಗೆ ಪರಿಸರ ಸ್ನೇಹಿ ಪರ್ಯಾಯವಾಗಿದೆ. ಯೋಜನೆಯಡಿ ಹೈಡ್ರೋಜನ್ ಸಂಗ್ರಹಣೆ ಹಾಗೂ ಇಂಧನ ಮರುಪೂರೈಕೆ (ರಿಫ್ಯುಯೆಲಿಂಗ್) ವ್ಯವಸ್ಥೆಯನ್ನೂ ಅಭಿವೃದ್ಧಿಪಡಿಸಲಾಗಿದೆ.

**ಮೋದಿ ಅಭಿವೃದ್ಧಿಗೆ ಬುನಾದಿ**

ರೈಲು ಉದ್ಘಾಟನೆಗೂ ಮುನ್ನ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದ ಪ್ರಧಾನಿ ಮೋದಿ, ಹೈಡ್ರೋಜನ್ ಚಾಲಿತ ರೈಲು ಹೊಂದಿರುವ ಆಯ್ದ ರಾಷ್ಟ್ರಗಳ ಸಾಲಿಗೆ ಭಾರತ ಸೇರ್ಪಡೆಯಾಗಿದೆ. ಇದು ಭಾರತೀಯ ರೈಲ್ವೆಯಲ್ಲಿ ಶುದ್ಧ ತಂತ್ರಜ್ಞಾನ ಅಳವಡಿಸಿಕೊಳ್ಳುವಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ. ಈ ರೈಲನ್ನು ಪ್ರಾಯೋಗಿಕ (ಪೈಲಟ್) ಯೋಜನೆಯಾಗಿ ಅಭಿವೃದ್ಧಿಪಡಿಸಲಾಗಿದ್ದು, ಭವಿಷ್ಯದಲ್ಲಿ ಪರಿಸರ ಸ್ನೇಹಿ ರೈಲು ಸಂಚಾರಕ್ಕೆ ಹೈಡ್ರೋಜನ್ ತಂತ್ರಜ್ಞಾನದ ಬಳಕೆಗೆ ಇದು ದಾರಿ ಮಾಡಿಕೊಡಲಿದೆ.

ನಮೋ ಗ್ರೀನ್ ರೈಲ್ ಎಂದು ಹೆಸರಿಡಲಾದ ಈ ಅತ್ಯಾಧುನಿಕ ರೈಲು ಜಿಂದ್ ಮತ್ತು ಸೋನಿಪತ್ ನಡುವಿನ 89 ಕಿಲೋಮೀಟರ್ ಉದ್ದದ ಬ್ರಾಡ್-ಗೇಜ್ ಮಾರ್ಗದಲ್ಲಿ ತನ್ನ ಅಧಿಕೃತ ಸಂಚಾರವನ್ನು ಆರಂಭಿಸಿದೆ. ಈ ಐತಿಹಾಸಿಕ ಹೆಜ್ಜೆಯೊಂದಿಗೆ ಜರ್ಮನಿ, ಚೀನಾ, ಜಪಾನ್ ಮತ್ತು ಅಮೆರಿಕದಂತಹ ಜಲಜನಕ ತಂತ್ರಜ್ಞಾನ ಹೊಂದಿರುವ ವಿಶ್ವದ ಪ್ರಮುಖ ದೇಶಗಳ ಸಾಲಿಗೆ ಭಾರತವೂ ಹೆಮ್ಮೆಯಿಂದ ಸೇರ್ಪಡೆಯಾಗಿದೆ. ಜರ್ಮನಿ ವಿಶ್ವದ ಮೊದಲ ಹೈಡ್ರೋಜನ್ ಪ್ರಯಾಣಿಕರ ರೈಲು ಅಲ್ಸ್ಟಮ್ ಕೊರಾಡಿಯಾ ಐಲಿಂಟ್ ಅನ್ನು ಆರಂಭಿಸಿದ ದೇಶವಾಗಿದೆ.

2022ರಲ್ಲಿ ಈ ರೈಲು 1,175 ಕಿ.ಮೀ ದೂರವನ್ನು ಮರು ಇಂಧನ ತುಂಬಿಸದೇ ಸಂಚರಿಸಿ ದಾಖಲೆ ನಿರ್ಮಿಸಿತ್ತು. ಜಪಾನ್ 2027ರ ಹಣಕಾಸು ವರ್ಷದ ಅಂತ್ಯದೊಳಗೆ ಹೈಬಾರಿ' ಹೆಸರಿನ ಮೊದಲ ಹೈಡ್ರೋಜನ್ ಹೈಬ್ರಿಡ್ ರೈಲನ್ನು ಸೇವೆಗೆ ತರಲು ಯೋಜಿಸಿದೆ.

ಅಮೆರಿಕ 2024ರಲ್ಲಿ ಕ್ಯಾಲಿಫೋರ್ನಿಯಾದಲ್ಲಿ ಜೆಮು ಹೆಸರಿನ ಮೊದಲ ಹೈಡ್ರೋಜನ್ ಚಾಲಿತ ಪ್ರಯಾಣಿಕರ ರೈಲನ್ನು ಪರಿಚಯಿಸಿತ್ತು. 10 ಬೋಗಿಗಳ ಹೈಡ್ರೋಜನ್ ಫ್ಯುಯೆಲ್ ಸೆಲ್ ಆಧಾರಿತ ರೈಲು 1,200 ಕಿಲೋವ್ಯಾಟ್ ಸಾಮರ್ಥ್ಯದ ಹೈಡ್ರೋಜನ್ ಫ್ಯುಯೆಲ್ ಸೆಲ್ ಚಾಲನಾ ವ್ಯವಸ್ಥೆ ಗರಿಷ್ಠ 75 ಕಿ.ಮೀ/ಗಂಟೆ ಕಾರ್ಯಾಚರಣಾ ವೇಗ ವಿನ್ಯಾಸ ವೇಗ 110 ಕಿ.ಮೀ/ಗಂಟೆ ಸುಮಾರು 2,600 ಪ್ರಯಾಣಿಕರ ಸಾಮರ್ಥ್ಯ ವಿನ್ಯಾಸ ತದಿಂದಲೇ ಸ್ವದೇಶಿ ಮಾದರಿಯಾಗಿ ಅಭಿವೃದ್ಧಿಪಡಿಸಲಾಗಿದೆ.

ಜಿಂದ್ ಜಂಕ್ಷನ್, ಗೋಹಾನಾ ಜಂಕ್ಷನ್ ಮತ್ತು ಸೋನಿಪತ್ ನಿಲ್ದಾಣಗಳನ್ನು ಸಂಪರ್ಕಿಸಲಿದೆ. ಜಿಂದ್ ಸಿಟಿ, ಪಾಂಡು ಪಿಂಡಾರಾ ಜಂಕ್ಷನ್, ಲಲಿತ್ ಖೇರಾ ಹಾಲ್ಟ್, ಭಂಭೇವಾ, ಇಸಾಪುರ್ ಖೇರಿ ಹಾಲ್ಟ್, ಬುಟಾನಾ ಹಾಲ್ಟ್, ಖಂಡ್ರಾಯಿ ಹಾಲ್ಟ್, ರಬ್ರಾ ಹಾಲ್ಟ್, ಲಾಥ್ ಹಾಲ್ಟ್, ಮೊಹಾನಾ, ಬರ್ವಾಸ್ನಿ ಹಾಲ್ಟ್ ಹಾಗೂ ಸೋನಿಪತ್ ನ್ಯೂ ಸೇರಿದಂತೆ ಹಲವು ನಿಲ್ದಾಣಗಳಲ್ಲಿ ನಿಲುಗಡೆ ಇರಲಿದೆ.

## ಆರೋಗ್ಯ ಕ್ಷೇತ್ರಕ್ಕೆ ಭಾರಿ ಕೊಡುಗೆ

ಈ ಭೇಟಿಯ ಅವಧಿಯಲ್ಲಿ ಪ್ರಧಾನಿಯವರು ಚಂಡೀಗಢದ ಪ್ರತಿಷ್ಠಿತ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯಾದ ಪಿಜಿಐಎಂಇಆರ್ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅತ್ಯಾಧುನಿಕ ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರ ಹಾಗೂ ಸುಧಾರಿತ ನರವಿಜ್ಞಾನ ಕೇಂದ್ರವನ್ನು ಉದ್ಘಾಟಿಸಿದರು.

ಸುಮಾರು 300 ಹಾಸಿಗೆಗಳ ಸಾಮರ್ಥ್ಯ ಹೊಂದಿರುವ ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರವು ಈ ಭಾಗದ ಗರ್ಭಿಣಿಯರು ಹಾಗೂ ನವಜಾತ ಶಿಶುಗಳಿಗೆ ಅತ್ಯುತ್ತಮ ಗುಣಮಟ್ಟದ ಚಿಕಿತ್ಸೆ ನೀಡಲು ನೆರವಾಗಲಿದ್ದು, ಈ ಪ್ರಾಂತ್ಯದ ಸಾವಿರಾರು ಬಡ ಕುಟುಂಬಗಳಿಗೆ ವರದಾನವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅದೇ ರೀತಿ, ಸುಧಾರಿತ ನರವಿಜ್ಞಾನ ಕೇಂದ್ರವು ನರರೋಗ ವಿಜ್ಞಾನ, ನರಶಸ್ತ್ರಚಿಕಿತ್ಸೆ (ನ್ಯೂರೋ ಸರ್ಜರಿ), ನರರೋಗ ತೀವ್ರ ನಿಗಾ ಘಟಕ ಸೇರಿದಂತೆ ಎಲ್ಲಾ ಪ್ರಮುಖ ಪರೀಕ್ಷಾ ಸೌಲಭ್ಯಗಳನ್ನು ಒಂದೇ ಸೂರಿನಡಿ ಒದಗಿಸಲಿದೆ.

ಇದು ಮೆದುಳು ಮತ್ತು ನರಸಂಬಂಧಿ ಗಂಭೀರ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳಿಗೆ ಸಕಾಲದಲ್ಲಿ ಜಾಗತಿಕ ಗುಣಮಟ್ಟದ ಚಿಕಿತ್ಸೆ ಸಿಗುವಂತೆ ಮಾಡುವುದಲ್ಲದೆ, ಈ ಕ್ಷೇತ್ರದಲ್ಲಿ ವೈದ್ಯಕೀಯ ಸಂಶೋಧನೆ ಮತ್ತು ತರಬೇತಿಗೂ ಹೆಚ್ಚಿನ ಶಕ್ತಿ ತುಂಬಲಿದೆ.



**ರೈಲ್ವೆ ವಿದ್ಯುದ್ದೀಕರಣ**

ಭಾರತೀಯ ರೈಲ್ವೆ ಜನವರಿ 2026ರ ಹೊತ್ತಿಗೆ ತನ್ನ ಬ್ರಾಡ್ ಗೇಜ್ ಜಾಲದ ಶೇಕಡಾ 99.4 ರಷ್ಟು ವಿದ್ಯುದ್ದೀಕರಣಗೊಳ್ಳುವ ಮೂಲಕ, ಮಹತ್ತರವಾದ ಮೈಲಿಗಲ್ಲು ಸಾಧಿಸಿದೆ. ಈಗಾಗಲೇ ವಿದ್ಯುತ್ ಎಂಜಿನ್‌ಗಳು ರೈಲ್ವೆ ಇಲಾಖೆಯ ಡೀಸೆಲ್ ಬಳಕೆ ಪ್ರಮಾಣವನ್ನು ಭಾರೀ ಪ್ರಮಾಣದಲ್ಲಿ ಕಡಿತಗೊಳಿಸಿದೆ.

2030ರ ವೇಳೆಗೆ ಭಾರತೀಯ ರೈಲ್ವೆ ಸಂಪೂರ್ಣ ವಿದ್ಯುದ್ದೀಕರಣದ ಗುರಿ ಹಾಕಿಕೊಂಡಿರುವ ಕೇಂದ್ರ ಸರ್ಕಾರ, ಈ ದಿಸೆಯಲ್ಲಿ ಅತ್ಯಂತ ವೇಗವಾಗಿ ಆದರೆ ಅಷ್ಟೇ ದೃಢವಾಗಿ ಹೆಜ್ಜೆ ಇಡುತ್ತಿದೆ.

## ಇ - ಸ್ವತ್ತು ತೊಡಕು ನಿವಾರಣೆಗೆ ಕಾರ್ಯದರ್ಶಿ ನೇತೃತ್ವದಲ್ಲಿ ಸಿಇಒಗಳ ಸಮಿತಿ ರಚನೆಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಪಂಚಾಯತ್ ಕಚೇರಿಗೆ ಗ್ರಾಮಸ್ಥರು ಅಲೆಯುವುದನ್ನು ತಪ್ಪಿಸಲು ಮನೆ ಬಾಗಿಲಿಗೆ ಇ-ಸ್ವತ್ತು ನೀಡಲು ತೀರ್ಮಾನಿಸಲಾಗಿದ್ದು, ಈ ಪ್ರಕ್ರಿಯೆಯಲ್ಲಿನ ತೊಡಕುಗಳ ನಿವಾರಣೆಗೆ ಪಂಚ ಸದಸ್ಯರ ಸಮಿತಿ ರಚಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿಯವರಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಸಚಿವರು, ತಂತ್ರಾಂಶ ಮತ್ತು ಸರ್ವರ್ ಸಮಸ್ಯೆಯಿಂದಾಗಿ ಸಾವಿರಾರು ಇ - ಸ್ವತ್ತು ಅರ್ಜಿಗಳು ಬಾಕಿ ಇವೆ.

ಈ ಹಿನ್ನೆಲೆಯಲ್ಲಿ ಪಂಚಾಯತ್ ರಾಜ್ ಕಾರ್ಯದರ್ಶಿ ಡಿ.ರಂದೀಪ್ ಅಧ್ಯಕ್ಷತೆಯಲ್ಲಿ ಬೆಂಗಳೂರು, ಮಂಗಳೂರು, ಕಲ್ಬುರ್ಗಿ ಮತ್ತು ಬೆಳಗಾವಿ ಜಿಲ್ಲೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳನ್ನು ಒಳಗೊಂಡ ಸಮಿತಿ ರಚಿಸಿ, 10 ದಿನಗಳ ಒಳಗಾಗಿ ನಿಯಮಗಳಿಗೆ ಯಾವ ಯಾವ ಬದಲಾವಣೆಗಳನ್ನು ಮಾಡಬಹುದು ಎಂಬ ಸ್ಪಷ್ಟ ವರದಿ ನೀಡಲು ಸೂಚಿಸಿದ್ದಾರೆ.

**ದಾಖಲೆ ಇಲ್ಲದ ಗ್ರಾಮಠಾಣಾ ಆಸ್ತಿಗೂ ಇ-ಸ್ವತ್ತು:** ರಾಜ್ಯದ ಗ್ರಾಮಠಾಣಾ ಪ್ರದೇಶದಲ್ಲಿ ಹಲವು ದಶಕ ಹಾಗೂ ತಲೆಮಾರುಗಳಿಂದ ವಾಸಿಸುತ್ತಿರುವ ಬಹುತೇಕ ನಿವಾಸಿಗಳ ಬಳಿ ತಮ್ಮ ಸ್ವತ್ತಿನ ದಾಖಲಾತಿಗಳಿಲ್ಲದ ಕಾರಣದಿಂದ ಅವರಿಗೆ ಇ-ಸ್ವತ್ತು ಪಡೆಯಲು ಸಾಧ್ಯವಾಗುತ್ತಿಲ್ಲ. ಇದರಿಂದ ಬ್ಯಾಂಕ್ ಸಾಲ ದೊರೆಯುತ್ತಿಲ್ಲ, ಮನೆ ದುರಸ್ತಿ, ಪುನರ್ ನಿರ್ಮಾಣ, ಕಟ್ಟಡ ನಕ್ಷೆ ಪಡೆಯಲು, ಸ್ವತ್ತು ಮಾರಾಟ ಮಾಡಲೂ ಅವರಿಗೆ ಸಾಧ್ಯವಾಗುತ್ತಿಲ್ಲ. ಈ ನಿಟ್ಟಿನಲ್ಲಿ ಮನೆ ಸಮೀಕ್ಷೆ ಮಾಡಿ ಸಮಸ್ಯೆ ಪರಿಹರಿಸಲೂ ಮಾರ್ಗೋಪಾಯ ಸೂಚಿಸುವಂತೆ ತಿಳಿಸಿದ್ದಾರೆ.



**ಬಿ ಖಾತೆ ನೀಡಿಕೆಗೂ ಚಿಂತನೆ:** ಗ್ರಾಮಠಾಣಾ ವ್ಯಾಪ್ತಿಯ ಹೊರಗೆ ಭೂಪರಿವರ್ತಿತ ಮತ್ತು ಭೂಪರಿವರ್ತನೆ ಆಗದ ಕಂದಾಯ ಭೂಮಿಯಲ್ಲಿಯೂ ಬಡಾವಣೆ, ಕಟ್ಟಡಗಳು ತಲೆ ಎತ್ತಿದ್ದು, ಬಿ ಖರಾಬು ಮತ್ತು ಗೋಮಾಳದಂತಹ ಸರ್ಕಾರಿ ಭೂಮಿಯನ್ನೂ ಸೇರಿಸಿಕೊಂಡು ಬಡಾವಣೆ ಮಾಡಿರುವ ನಿಟ್ಟಿನಲ್ಲಿ ನಮೂನೆ 11ಬಿ ನೀಡಲೂ ಸಾಧ್ಯವಾಗಿರುವುದಿಲ್ಲ. ಜೊತೆಗೆ ಮೂಲ ಸೌಕರ್ಯಗಳಾದ ರಸ್ತೆ, ನೀರು, ಚರಂಡಿ, ಬೀದಿ ದೀಪ ಇತ್ಯಾದಿ ಸೌಲಭ್ಯಗಳನ್ನು ಗ್ರಾಮ ಪಂಚಾಯತ್‌ಗಳು ಒದಗಿಸಿದ್ದರೂ ತೆರಿಗೆಯನ್ನು ಪಡೆಯಲಾಗುತ್ತಿಲ್ಲ. ಈ ನಿಟ್ಟಿನಲ್ಲಿ ಮೇಲಿನ ಎಲ್ಲಾ ಸಮಸ್ಯೆ ನಿವಾರಿಸಿ, ಗ್ರಾಮೀಣ ಸ್ವತ್ತುಗಳಿಗೂ ಸುಗಮವಾಗಿ ಇ-ಸ್ವತ್ತು ನೀಡುವ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸುವಂತೆ ಈಶ್ವರ ಖಂಡ್ರೆ ಸೂಚಿಸಿದ್ದಾರೆ. ರಾಜ್ಯದಲ್ಲಿ ಸುಮಾರು 65 ಲಕ್ಷ ಆಸ್ತಿಗಳು ಗ್ರಾಮಠಾಣಾ ವ್ಯಾಪ್ತಿಯಲ್ಲಿ ಬರುತ್ತವೆ. ಇದು ಅವರಿಗೆ ಪೂರ್ವಜರಿಂದ ಬಂದ ಬಳುವಳಿಯಾಗಿದ್ದು, ಕೆಲವರ ಬಳಿ ತಮ್ಮ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ದಾಖಲೆ ಇಲ್ಲ. ಹೀಗಾಗಿ ಒಂದು ಬಾರಿಯ ಕ್ರಮವಾಗಿ ನಿಯಮಾವಳಿ ಸರಳೀಕರಣ ಮಾಡಿ, ಸಾರ್ವಜನಿಕರ ಆಕ್ಷೇಪಣೆ ಕರೆದು 100 ದಿನಗಳ ಒಳಗಾಗಿ ಗ್ರಾಮಠಾಣಾ ಆಸ್ತಿಗಳಿಗೆ ಸಮರೋಪಾದಿಯಲ್ಲಿ ಇ-ಖಾತಾ ವಿತರಿಸಲು ಕ್ರಮ ಜರುಗಿಸಲು ಕಳೆದ ತಿಂಗಳು ಸಚಿವರು ಸೂಚಿಸಿದ್ದರು.

## ಶಕ್ತಿ ಕೇಂದ್ರ ವಿಧಾನಸೌಧಕ್ಕೂ ತಟ್ಟಿದ ಬರಗಾಲದ ಬಿಸಿ: ನೀರು, ವಿದ್ಯುತ್ ಮಿತ ಬಳಕೆಗೆ ಸಿಎಸ್ ಆದೇಶ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರಗಾಲದ ಛಾಯೆ ಆವರಿಸಿದ್ದು, ಯಾವ ದಿಕ್ಕಿಗೆ ಹೋದರೂ ನೀರಿಲ್ಲ. ಕಳೆದ ವಾರ ಅಲ್ಪ ಸ್ವಲ್ಪ ಮಳೆಯಾದರೂ ಯಾವುದೇ ಜಲಾಶಯಗಳು ತುಂಬುವಷ್ಟು ಒಳ ಹರಿವು ಬಂದಿಲ್ಲ. ಇದೀಗ ಬರಗಾಲದ ಬಿಸಿ ರಾಜ್ಯದ ಶಕ್ತಿ ಕೇಂದ್ರವಾದ ವಿಧಾನಸೌಧ, ವಿಕಾಸಸೌಧ ಮತ್ತು ಸಚಿವಾಲಯಗಳಿಗೂ ತಟ್ಟಿದ್ದು, ನೀರು ಹಾಗೂ ವಿದ್ಯುತ್ ಅನ್ನು ಮಿತವಾಗಿ ಬಳಸುವಂತೆ ನೌಕರರಿಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಆದೇಶ ಹೊರಡಿಸಿದ್ದಾರೆ.

ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಸೂಚನೆ ಮೇರೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಅನಗತ್ಯವಾಗಿ ನೀರು ಪೋಲಾಗುವುದನ್ನು ತಡೆಗಟ್ಟುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಪ್ರಸ್ತುತ ಹವಾಮಾನ ವೈಪರೀತ್ಯದಿಂದಾಗಿ ನೈಸರ್ಗಿಕ ಸಂಪನ್ಮೂಲಗಳ ಕೊರತೆ ಎದುರಾಗಿದೆ. ಇಂತಹ ಪರಿಸ್ಥಿತಿಯಲ್ಲಿ ವಿದ್ಯುತ್ ಮತ್ತು ನೀರಿನಂತಹ ಅತ್ಯಮೂಲ್ಯ ಸಂಪನ್ಮೂಲಗಳನ್ನು ಅಪವ್ಯಯ ಮಾಡದೆ ಮಿತವಾಗಿ ಬಳಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಈ ಆದೇಶವನ್ನು ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಅತ್ಯಂತ ಕಟ್ಟುನಿಟ್ಟಾಗಿ ಪಾಲಿಸುವಂತೆ ಶಾಲಿನಿ ರಜನೀಶ್ ಆದೇಶಿಸಿದ್ದಾರೆ.

ಸಚಿವಾಲಯದಲ್ಲಿ ವಿದ್ಯುತ್‌ನ್ನು ಮಿತವಾಗಿ ಬಳಸುವ ಕುರಿತು ಅನೇಕ ಸುತ್ತೋಲೆಗಳ ಮೂಲಕ ಹಲವಾರು ಬಾರಿ ಸೂಚನೆಗಳನ್ನು ನೀಡಲಾಗಿದೆ. ಆದರೂ, ಸಹ ಸಚಿವಾಲಯದ ಕಚೇರಿಗಳಲ್ಲಿ ವಿದ್ಯುತ್ತಿನ ಬಳಕೆಯಲ್ಲಿ ನಿಯಂತ್ರಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ವಿದ್ಯುತ್ ನವೀಕರಿಸಲಾಗದಂತಹ ಅತ್ಯಂತ ಮಹತ್ವದ ನೈಸರ್ಗಿಕ ಸಂಪನ್ಮೂಲವಾಗಿರುವುದರಿಂದ ವಿದ್ಯುತ್‌ನ್ನು ಸ್ವೇಚ್ಛಾ ಮನೋಭಾವದಿಂದ ಬಳಸುವುದು ಸರಿಯಾದ ಕ್ರಮವಾಗಿರುವುದಿಲ್ಲ.



ಇಂತಹ ಅಮೂಲ್ಯವಾದ ವಿದ್ಯುತ್‌ನ್ನು ವ್ಯಯ ಮಾಡದೇ ಮಿತವಾಗಿ ಬಳಸುವುದು ಮತ್ತು ಅನಗತ್ಯ ಬಳಕೆಯನ್ನು ತಡೆಗಟ್ಟುವುದರ ಮೂಲಕ ವಿದ್ಯುತ್ ಉಳಿತಾಯ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಆದ್ದರಿಂದ ಈ ಕೆಳಕಂಡ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವಂತೆ ಸೂಚಿಸಿದೆ.

## ಕನಕಪುರದಲ್ಲಿ 2ನೇ ವಿಮಾನ ನಿಲ್ದಾಣ ನಿರ್ಮಾಣ ಪ್ರಸ್ತಾವನೆ: ಸಿಎಂ ಡಿಕೆಶಿಗೆ ವಿಜಯೇಂದ್ರ ಬಹಿರಂಗ ಪತ್ರ

• ಉದಯವಾಹಿನಿ, ಬೆಂಗಳೂರು

ಕನಕಪುರದಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ಪ್ರಸ್ತಾವನೆ ಕುರಿತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬಹಿರಂಗ ಪತ್ರ ಬರೆದಿದ್ದಾರೆ. ಬೆಂಗಳೂರು ಮಹಾನಗರ ತನ್ನ ಸಾಮರ್ಥ್ಯವನ್ನು ಮೀರಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ, ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ರಾಜ್ಯಕ್ಕೆ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿರುವುದು ಸ್ವಾಗತಾರ್ಹ. ಆದರೆ, ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ತಮ್ಮ ಕ್ಷೇತ್ರವಾದ ಕನಕಪುರ ವ್ಯಾಪ್ತಿಯಲ್ಲಿ ಸ್ಥಾಪಿಸುವ ಬಗ್ಗೆ ಕೇಳಿಬರುತ್ತಿರುವ ಮಾಹಿತಿಯ ಹಿನ್ನೆಲೆಯಲ್ಲಿ, ಸಮಗ್ರ ಕರ್ನಾಟಕದ ಹಿತದೃಷ್ಟಿಯಿಂದ ಕೆಲವು ಮಹತ್ವದ ವಿಚಾರಗಳನ್ನು ತಮ್ಮ ಗಮನಕ್ಕೆ ತರಲು ಈ ಬಹಿರಂಗ ಪತ್ರ ಎಂದಿದ್ದಾರೆ. ಹಿಂದಿನ ಕೆಲವು ಯೋಜನೆಗಳ ಅನುಭವಗಳಿಂದ ನಾವು ಪಾಠ ಕಲಿಯಬೇಕಾಗಿದೆ. ಉದಾಹರಣೆಗೆ, ಎಲೆಕ್ಟ್ರಾನಿಕ್ ಸಿಟಿಯನ್ನು ರಾಜ್ಯದ ಒಳಭಾಗದಲ್ಲಿ ಅಭಿವೃದ್ಧಿಪಡಿಸುವ ಬದಲು ತಮಿಳುನಾಡು ಗಡಿಯ ಸಮೀಪ ನಿರ್ಮಿಸಿದ ಪರಿಣಾಮ, ಅದರ ಆರ್ಥಿಕ ಮತ್ತು ಕೈಗಾರಿಕಾ ಬೆಳವಣಿಗೆಯ ಪ್ರಯೋಜನದ ಒಂದು ಭಾಗ ನೆರೆಯ ರಾಜ್ಯಕ್ಕೂ ಹರಿಯಿತು ಎಂದು ತಿಳಿಸಿದ್ದಾರೆ. ಅದೇ ರೀತಿಯಲ್ಲಿ, ದೇವನಹಳ್ಳಿಯಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣವಾದ ಬಳಿಕ ಅದರ ಅಭಿವೃದ್ಧಿಯ ಪೂರಕ



ಪರಿಣಾಮಗಳು ಮುಖ್ಯವಾಗಿ ಬೆಂಗಳೂರು ಸುತ್ತಮುತ್ತ ಮಾತ್ರ ಸೀಮಿತಗೊಂಡಿವೆ. ಇದೇ ಯೋಜನೆ ತುಮಕೂರು ಭಾಗದಲ್ಲಿ ಜಾರಿಯಾಗಿದ್ದರೆ ಮಧ್ಯ ಹಾಗೂ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಹೊಸ ವೇಗ ದೊರೆಯುತ್ತಿತ್ತು. ತುಮಕೂರು ಕೈಗಾರಿಕಾ ವಲಯವಾಗಿ ಮತ್ತಷ್ಟು ಬೆಳೆಯುತ್ತಿತ್ತು. ಬೆಂಗಳೂರು ಮೇಲಿನ ಜನಸಂಖ್ಯೆ ಮತ್ತು ಸಂಚಾರದ ಒತ್ತಡವೂ ಗಮನಾರ್ಹವಾಗಿ ಕಡಿಮೆಯಾಗುತ್ತಿತ್ತು ಎಂದಿದ್ದಾರೆ.

ಈ ಹಿನ್ನೆಲೆಯಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಕನಕಪುರದಲ್ಲಿ ನಿರ್ಮಿಸುವ ಬದಲು ತುಮಕೂರು ಹಾಗೂ ಅದರ ಸುತ್ತಮುತ್ತಲಿನ ಪ್ರದೇಶದಲ್ಲಿ ಸ್ಥಾಪಿಸುವುದೇ ರಾಜ್ಯದ ದೀರ್ಘಾವಧಿಯ ಹಿತಕ್ಕೆ ಅನುಕೂಲಕರವಾಗಿದೆ. ತುಮಕೂರು ಈಗಾಗಲೇ ರಾಷ್ಟ್ರೀಯ ಹೆದ್ದಾರಿಗಳು, ರೈಲು ಸಂಪರ್ಕ, ಕೈಗಾರಿಕಾ ಬೆಳವಣಿಗೆ ಮತ್ತು ಭೌಗೋಳಿಕ ಸ್ಥಾನಮಾನದಿಂದಾಗಿ ರಾಜ್ಯದ ಮಧ್ಯ ಭಾಗಕ್ಕೆ ಸಹಜ ಪ್ರವೇಶದ್ವಾರವಾಗಿದೆ.

### ಮತ್ತಷ್ಟು ಹೆಚ್ಚಿಸುವ ಅಪಾಯ

ಮೊದಲನೆಯದಾಗಿ, ಬೆಂಗಳೂರು ಅಭಿವೃದ್ಧಿಯೇ ಕರ್ನಾಟಕದ ಅಭಿವೃದ್ಧಿಯಲ್ಲ. ರಾಜ್ಯದ ಅಭಿವೃದ್ಧಿಯ ಫಲವು ಉತ್ತರ ಕರ್ನಾಟಕ, ಮಧ್ಯ ಕರ್ನಾಟಕ, ಕರಾವಳಿ, ಕಲ್ಯಾಣ ಕರ್ನಾಟಕ, ಮಲೆನಾಡು ಹಾಗೂ ಹಳೆ ಮೈಸೂರು ಭಾಗ ಸೇರಿದಂತೆ ಪ್ರದೇಶಗಳಿಗೂ ಸಮಾನವಾಗಿ ತಲುಪುವಂತೆ ಯೋಜನೆಗಳನ್ನು ರೂಪಿಸುವುದು ಯಾವುದೇ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ತಿಳಿಸಿದ್ದಾರೆ. ಎರಡನೆಯದಾಗಿ, ಬೆಂಗಳೂರು ಈಗಾಗಲೇ ಜನಸಂಖ್ಯೆ, ವಾಹನ ದಟ್ಟಣೆ, ಕುಡಿಯುವ ನೀರು, ಸಂಚಾರ ಮತ್ತು ಪರಿಸರದ ಮೇಲೆ ಅತಿಯಾದ ಒತ್ತಡವನ್ನು ಎದುರಿಸುತ್ತಿದೆ.

ಮತ್ತೊಂದು ಬೃಹತ್ ಮೂಲಸೌಕರ್ಯ ಯೋಜನೆಯನ್ನು ಬೆಂಗಳೂರಿನ ಸುತ್ತಮುತ್ತಲೇ ಕೇಂದ್ರೀಕರಿಸುವುದು ಸಮಸ್ಯೆಗಳನ್ನು ಮತ್ತಷ್ಟು ಹೆಚ್ಚಿಸುವ ಅಪಾಯವನ್ನು ಹೊಂದಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಇಲ್ಲಿ ವಿಮಾನ ನಿಲ್ದಾಣ ನಿರ್ಮಾಣವಾದರೆ ಮಧ್ಯ ಕರ್ನಾಟಕ, ಉತ್ತರ ಕರ್ನಾಟಕ ಮತ್ತು ಹಳೆ ಮೈಸೂರು ಭಾಗಗಳ ಜನತೆಗೆ ಸಮಾನ ಅನುಕೂಲವಾಗುತ್ತದೆ ಎಂದಿದ್ದಾರೆ. ಇದಕ್ಕೆ ವಿರುದ್ಧವಾಗಿ, ಕನಕಪುರ ರಾಜ್ಯದ ದಕ್ಷಿಣ ತುದಿಯಲ್ಲಿದ್ದು, ಅಲ್ಲಿಗೆ ವಿಮಾನ ನಿಲ್ದಾಣ ನಿರ್ಮಿಸಿದರೆ ಅದರ ಪ್ರಯೋಜನವು ಸೀಮಿತ ಪ್ರದೇಶಕ್ಕಷ್ಟೇ ಸೀಮಿತವಾಗುವ ಸಾಧ್ಯತೆ ಇದೆ. ಅಲ್ಲದೆ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ. ಮೀಸಲು ಅರಣ್ಯ ಪ್ರದೇಶಗಳು ಹಾಗೂ ಫಲವತ್ತಾದ ಕೃಷಿಭೂಮಿಯ ಸಮೀಪ ಇಂತಹ ಬೃಹತ್ ಯೋಜನೆಯನ್ನು ಕೈಗೊಳ್ಳುವುದು ಪರಿಸರ ಹಾಗೂ ಕೃಷಿ ಎರಡೂ ದೃಷ್ಟಿಯಿಂದ ಸೂಕ್ತವಲ್ಲ ಎಂದು ತಿಳಿಸಿದ್ದಾರೆ. ನೆರೆಯ ರಾಜ್ಯಗಳನ್ನು ಗಮನಿಸಿದರೆ ಸಮತೋಲಿತ ಅಭಿವೃದ್ಧಿಯ ಮಹತ್ವ ಸ್ಪಷ್ಟವಾಗುತ್ತದೆ. ತಮಿಳುನಾಡಿನಲ್ಲಿ ಚೆನ್ನೈ ಜೊತೆಗೆ ಕೊಯಮತ್ತೂರು, ಮಧುರೈ, ತಿರುಚಿರಾಪಳ್ಳಿ, ಸೇಲಂ, ತಿರುನೆಲ್ವೇಲಿ ಸೇರಿದಂತೆ ಅನೇಕ ನಗರಗಳು ಅಭಿವೃದ್ಧಿಗೊಂಡಿವೆ.

ಮಹಾರಾಷ್ಟ್ರದಲ್ಲಿ ಮುಂಬೈ ಜೊತೆಗೆ ಪುಣೆ, ನಾಗುರ, ಔರಂಗಾಬಾದ್, ನಾಸಿಕ್, ಕೊಲ್ಹಾಪುರ ಮುಂತಾದ ನಗರಗಳು ಬೆಳವಣಿಗೆಯ ಕೇಂದ್ರಗಳಾಗಿವೆ. ಇದೇ ರೀತಿಯಾಗಿ ಹಿಂದಿನ ಅವಿಭಜಿತ ಆಂಧ್ರಪ್ರದೇಶದಲ್ಲೂ ಹೈದರಾಬಾದ್ ಜೊತೆಗೆ ವಿಶಾಖಪಟ್ಟಣಂ, ವಿಜಯವಾಡ, ಗುಂಟೂರು, ತಿರುಪತಿ, ವಾರಂಗಲ್ ಸೇರಿದಂತೆ ಅನೇಕ ನಗರಗಳು ಸಮಾನವಾಗಿ ಅಭಿವೃದ್ಧಿಗೊಂಡಿದ್ದವು ಎಂದು ವಿವರಿಸಿದ್ದಾರೆ. ಆದರೆ ಕರ್ನಾಟಕದಲ್ಲಿ ಅಭಿವೃದ್ಧಿಯ ಬಹುಪಾಲು ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗಿದೆ.

---

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14,253/Gram 24ct ₹13,065/Gram 22ct ಬೆಳ್ಳಿ: ₹235.00/Gram

## ಹೋಟೆಲ್ ಸರ್ವಿಸ್ ಲಿಫ್ಟ್‌ನಲ್ಲಿ ಸಿಲುಕಿ ಯುವಕನ ದಾರುಣ ಸಾವು..!

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯ ಜಯನಗರದಲ್ಲಿ ಭೀಕರ ಅಪಘಾತವೊಂದು ಸಂಭವಿಸಿದೆ. ವಾಣಿಜ್ಯ ಸಂಸ್ಥೆಯೊಂದರ ಹಳೆಯ ಮಾದರಿಯ ಸರ್ವಿಸ್ ಲಿಫ್ಟ್‌ನಲ್ಲಿ ತಲೆ ಸಿಲುಕಿ ಯುವಕನೊಬ್ಬ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ.

ಮೃತನನ್ನು ಧಾರವಾಡ ಮೂಲದ ರಾಜೇಶ್ (22) ಎಂದು ಗುರುತಿಸಲಾಗಿದೆ. ಸ್ವಂತ ಹೋಟೆಲ್ ಆರಂಭಿಸುವ ಉದ್ದೇಶ ಹೊಂದಿದ್ದ ಮೃತ ರಾಜೇಶ್, ಹೋಟೆಲ್ ನಿರ್ವಹಣೆ ಬಗ್ಗೆ ತಿಳಿದುಕೊಳ್ಳಲು ತನ್ನ ಸ್ನೇಹಿತನಿಗೆ ಸೇರಿದ ಜಯನಗರದ 27ನೇ ಕ್ರಾಸ್, 4ನೇ ಟಿ ಬ್ಲಾಕ್‌ನಲ್ಲಿರುವ ದಕ್ಷಿಣ ಉಪಹಾರ್ ಹೋಟೆಲ್‌ಗೆ ತೆರಳಿದ್ದರು. ಹೋಟೆಲ್‌ನ ದೈನಂದಿನ ಕಾರ್ಯವೈಖರಿಯನ್ನು ಗಮನಿಸುತ್ತಿದ್ದ ವೇಳೆ ಈ ದುರ್ಘಟನೆ ನಡೆದಿದೆ. ಬೆಳಗ್ಗೆ ಸುಮಾರು 8.30ರ ವೇಳೆಗೆ, ನೆಲ ಮಹಡಿಯಿಂದ ಮೊದಲ ಮಹಡಿಗೆ ಆಹಾರ ಪದಾರ್ಥಗಳನ್ನು ಹೋಟೆಲ್‌ನ ಸರಕು ಸಾಗಣೆ (ಸರ್ವಿಸ್) ಲಿಫ್ಟ್ ಮೂಲಕ ಕಳುಹಿಸಲಾಗುತ್ತಿತ್ತು. ಇದೇ ವೇಳೆ ಲಿಫ್ಟ್‌ನ ಬಾಗಿಲು ಏಕಾಏಕಿ ತೆರೆದಿದೆ.

ರಾಜೇಶ್ ಲಿಫ್ಟ್‌ನಿಂದ ಹೊರಬರಲು ಮುಂದಾದಾಗ, ಲಿಫ್ಟ್ ಏಕಾಏಕಿ ಚಲಿಸಲು ಆರಂಭಿಸಿದೆ. ಇದರಿಂದ ಅವರ ತಲೆ ಲಿಫ್ಟ್‌ನ ಮೇಲ್ಭಾಗದ ಅಂಚಿಗೆ ಸಿಲುಕಿ ತೀವ್ರವಾಗಿ ಪೆಟ್ಟಾಗಿದೆ. ಗಂಭೀರವಾಗಿ ಗಾಯಗೊಂಡ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಈ ಸಂಬಂಧ ಹೋಟೆಲ್ ಹಾಗೂ ಕಟ್ಟಡ ಮಾಲೀಕರ ವಿರುದ್ಧ ನಿರ್ಲಕ್ಷ್ಯದ ಆರೋಪದಡಿ ಪ್ರಕರಣ ದಾಖಲಿಸಲಾಗಿದೆ.

## ಸುರಂಗ ರಸ್ತೆಗೆ ಲಾಲ್‌ಬಾಗ್‌ನಲ್ಲಿ ಮರ ಕಡಿಯಲು ತಡೆ: ಹೈಕೋರ್ಟ್ ಆದೇಶ ಸ್ವಾಗತಿಸಿದ ತೇಜಸ್ವಿ ಸೂರ್ಯ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ ಸುರಂಗ ರಸ್ತೆ ನಿರ್ಮಾಣ ಕಾಮಗಾರಿಯ ಗುತ್ತಿಗೆ ನೀಡುವ ಪ್ರಕ್ರಿಯೆಯು ತಾವು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಯ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ. ಬೆಂಗಳೂರಿನ ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರು, ರಾಜ್ಯ ಸರ್ಕಾರದ ಸುರಂಗ ಮಾರ್ಗ ಯೋಜನೆಯನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ನಿನ್ನೆ ವಿಚಾರಣೆಗೆ ಹಾಜರಾಗಿದ್ದರು.

ಈ ಕುರಿತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ತೇಜಸ್ವಿ ಸೂರ್ಯ, ಮುಖ್ಯ ನ್ಯಾಯಮೂರ್ತಿಗಳು, ಈ ಅರ್ಜಿ ಬಾಕಿ ಇರುವ ವಿಚಾರವನ್ನು ಸಾಧ್ಯತೆಯ ಗುತ್ತಿಗೆದಾರರಿಗೆ ರಾಜ್ಯ ಸರ್ಕಾರ ತಿಳಿಸಬೇಕು ಮತ್ತು ಯಾವುದೇ ಹಕ್ಕು ಸೃಷ್ಟಿಯಾಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶಿಸಿದ್ದಾರೆ. ಯಾವುದೇ ಗುತ್ತಿಗೆ ನೀಡಿದರೂ ಅದು ಪಿಐಎಲ್‌ನ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ. ಲಾಲ್‌ಬಾಗ್‌ನಲ್ಲಿ ಮರಗಳನ್ನು ಕಡಿಯದಂತೆ ನೀಡಿದ್ದ ಹಿಂದಿನ ಆದೇಶವನ್ನೂ ನ್ಯಾಯಾಲಯ ಪುನರುಚ್ಚರಿಸಿದೆ ಎಂದು ತಿಳಿಸಿದ್ದಾರೆ. ಈ ಅರ್ಜಿ ಬಾಕಿ ಇರುವ ವಿಚಾರವನ್ನು ಸಾಧ್ಯತೆಯ ಗುತ್ತಿಗೆದಾರರಿಗೆ

ಸುರಂಗ ರಸ್ತೆಗಾಗಿ ಲಾಲ್‌ಬಾಗ್‌ನಲ್ಲಿ ಮರ ಕಡಿಯುವುದಕ್ಕೆ ತಡೆ ನೀಡಿರುವ ಹೈಕೋರ್ಟ್ ಆದೇಶವನ್ನು ಸ್ವಾಗತಿಸಿದ ಅವರು, ಯೋಜನೆ ಕಾನೂನುಬಾಹಿರ, ಪರಿಸರ ಮೌಲ್ಯಮಾಪನವೂ ನಡೆದಿಲ್ಲ ಎಂದು ಆರೋಪಿಸಿದರು.ಇದೇ ಪ್ರಕರಣದ ಅಂತಿಮ ವಿಚಾರಣೆ ಆಗಸ್ಟ್ 20ರಂದು ನಡೆಯಲಿದೆ ಎಂದು ಹೇಳಿದರು.

## ಗುರುರಾಯರ ಸನ್ನಿಧಿಯಲ್ಲಿ ಮಾಧವ ಗಾಯನ ಸೇವೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಬೆಂಗಳೂರಿನ ಜಯನಗರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಗುರುವಾರದ ಪ್ರಯುಕ್ತ ಬೆಳಿಗ್ಗೆ ವಿಶೇಷ ಪೂಜಾ ಕೈಂಕರ್ಯಗಳು, ಅನ್ನದಾನ ಸೇವೆಗಳು ಜರುಗಿದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ, ಗಜವಾಹನೋತ್ಸವ ತೊಟ್ಟಿಲು ಸೇವೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಯುವ ಗಾಯಕ ಶ್ರೀ ಮಾಧವ ಎಂ. ನಾಡಿಗೇರ ಅವರು ಅಪರೋಕ್ಷ ಜ್ಞಾನಿಗಳಿಂದ ರಚಿಸಲ್ಪಟ್ಟ ಹಲವಾರು ಅಪರೂಪದ ಹರಿದಾಸರ ಪದಗಳನ್ನು ತಾರತಮ್ಯೋಕ್ತವಾಗಿ ಮತ್ತು ಸುಶ್ರಾವ್ಯವಾಗಿ ಹಾಡಿ, ನೆರೆದಿದ್ದ ದಾಸಸಾಹಿತ್ಯಾಭಿಮಾನಿಗಳ ಮನಸೂರೆಗೊಂಡರು. ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಶ್ರೀ ರಾಮು ಕೊಡೇಕಲ್, ತಬಲಾ ವಾದನದಲ್ಲಿ ಶ್ರೀ ಭೀಮಾಶಂಕರ ಹೇಮನೂರು ಮತ್ತು ತಾಳದಲ್ಲಿ ಮಾ|| ಆದಿತ್ಯ ಸಾಥ್ ನೀಡಿದರು.

## ನ್ಯಾಯಾಲಯದ ಆದೇಶಕ್ಕೆ ಅಗೌರವ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಹದೇವಪುರ

ಅಕ್ರಮ ಸರ್ಕಾರಿ ಕೆರೆ ಒತ್ತುವರಿ ತೆರವುಗಾಗಿ ನಡೆದ ಸರ್ವೆ ವೇಳೆ ಕಂದಯ ಅಧಿಕಾರಿಗಳು, ಎ.ಡಿ. ಎಲ್.ಆರ್ ಗೈರು ಹಾಜರಾಗಿದ್ದು ನ್ಯಾಯಾಲಯದ ಆದೇಶಕ್ಕೆ ಅಗೌರವ ತೋರಿಸಿದ್ದಾರೆ ಎಂದು ಸಾಮಾಜಿಕ ಹೋರಾಟಗಾರರು ಆಕ್ರೋಶ ಹೊರಹಾಗಿದ್ದರು. ಕ್ಷೇತ್ರದ ಬಿದರಹಳ್ಳಿ ಪಂಚಾಯತಿಯಲ್ಲಿನ ಕಾಡುಅಗ್ರಹಾರ ಗ್ರಾಮದ ಸರ್ವೆ ನಂ.54 ಎಲ್ಲಿರುವ ಸರ್ಕಾರಿ ಕೆರೆಯ ಅಕ್ರಮ ಅತಿಕ್ರಮಣ ಕುರಿತು ಉಚ್ಚ ನ್ಯಾಯಾಲಯದ ಆದೇಶದಂತೆ ನಿಗದಿ ಸರ್ವೆಯನ್ನು ಪೋಲಿಸ್ ರಕ್ಷಣೆಯೊಂದಿಗೆ ನ್ಯಾಯಸಮ್ಮತವಾಗಿ ಇಂದು ನಡೆಯಿತು. ಸಾಮಾಜಿಕ ಹೋರಾಟಗಾರ ಮುನಿರಾಜ್ ಎಂಬುವವರು ಕೆರೆ ಅಕ್ರಮದ ಬಗ್ಗೆ ಹಲವು ಇಲಾಖೆಗಳ ಅಧಿಕಾರಿಗಳಿಗೆ ಕಳೆದ 4 ವರ್ಷಗಳಿಂದ ದೂರು ನೀಡಿತ್ತಬಂದಿದ್ದು. ಪ್ರಸ್ತುತ ನ್ಯಾಯಲಯದ ಆದೇಶದಂತೆ ಸರ್ವೆ ನಡೆಸಿ ಸಂಪೂರ್ಣ ಕೆರೆಯ ಆಸ್ತಿಯನ್ನು ಸರ್ಕಾರದ ವಶಕ್ಕೆ ಪಡದುಕೊಳ್ಳಬೇಕೆಂದು ಮನವಿ ಮಾಡಿದ್ದಾರೆ. ಸರ್ವೆ ನಡೆಯುವ ವೇಳೆ ಭೂ ಕಂಬಳಿಗೆದಾರರು ಹಾಗೂ ಸಾಮಾಜಿಕ ಹೋರಾಟಗಾರರೊಂದಿಗೆ ಮಾತಿನ ಚಕಮಕಿ ನಡೆಯಿತು. ಈ ವೇಳೆ ಪೊಲೀಸರು ಮಧ್ಯ ಪ್ರವೇಶಿಸಿ ಗಲಭೆ ಪರಿಸ್ಥಿತಿಯನ್ನು ನಿಯಂತ್ರಿಸಿದರು.ಆರ್. ಗೀತಾ ಬಿನ್ ಡಿ.ಎ ಗೋಪಾಲ್ 15 ಗುಂಟೆ, ಕಾಂತಪ್ಪ 1/1/2 ಗುಂಟೆ, ಹಿಡುವಳಿದಾರರು 1/2 ಗುಂಟೆ ಒಟ್ಟು 17 ಗುಂಟೆ ಕೆರೆ ಜಾಗವನ್ನು ಆಕ್ರಮಿಸಿಕೊಂಡಿದ್ದು. ಬಫರ್ ಜೋನ್ ನಲ್ಲಿರುವ 20 ಅಡಿ ಜಾಗವನ್ನು ಕಾಂತಪ್ಪ ರವರು ಆಕ್ರಮಿಸಿಕೊಂಡು ಖಾಸಗಿ ವಾಣಿಜ್ಯ ಉದ್ದೇಶಕ್ಕಾಗಿ ಶೇಡ್ ನಿರ್ಮಿಸಿರುವುದನ್ನು ತೆರವುಗೊಳಿಸಬೇಕೆಂದು ಎಂದು ಆರೋಪಿಸಿದ್ದರು. ನ್ಯಾಯಲಯದ ಆದೇಶವನ್ನು ಪಾಲಿಸದ ಸಹಾಯಕ ಭೂ ದಾಖಲೆಗಳ ನಿರ್ದೇಶಕರ ಗೈರು ಹಾಜರಾಗಿದ್ದು ನ್ಯಾಯಲಯದ ಆದೇಶಕ್ಕೆ ಅಗೌರವ ತೋರಿದ್ದಾರೆ ಎಂದರು.

ಈ ವೇಳೆ ಕಂದಯ ಅಧಿಕಾರಿಗಳು, ಸರ್ವೆ ಅಧಿಕಾರಿಗಳು ಗ್ರಾಮಸ್ಥರು ಯುವ ಮುಖಂಡರಾದ ಯಲ್ಲಪ್ಪ, ಶಿವಕುಮಾರ್, ಶ್ರೀಕಾಂತ್, ಬಾಲಕೃಷ್ಣ, ಮಾರೇಗೌಡ, ಮನೋಜ್ ಈವೇಳೆ ಇದ್ದರೂ.

## ಕಂಪನಿ ಘನತೆಗೆ ಮಸಿ ಬಳಿಯುವ ಪ್ರಯತ್ನ; ಮಾಜಿ ಉದ್ಯೋಗಿ ಆರೋಪ ತಳ್ಳಿ ಹಾಕಿದ IndiGo

• ಉದಯವಾಹಿನಿ, ಬೆಂಗಳೂರು

ಯೂನಿಫಾರ್ಮ್ ಟೈ ಧರಿಸದಿದ್ದಕ್ಕೆ ಅಧಿಕಾರಿಯೊಬ್ಬರು ಸೂಪರ್‌ವೈಸರ್ ಕಾಲು ಮುಟ್ಟಿ ಕ್ಷಮೆ ಕೇಳುವಂತೆ ಒತ್ತಾಯಿಸಿದರು ಎಂದು ಮಾಜಿ ಗ್ರೌಂಡ್ ಸ್ಟಾಫ್ ಉದ್ಯೋಗಿ ಮಾಡಿದ್ದ ಆರೋಪಗಳನ್ನು ಇಂಡಿಗೋ ಸಂಸ್ಥೆಯು ತೀವ್ರವಾಗಿ ಖಂಡಿಸಿದ್ದು, ಇವೆಲ್ಲವೂ ಆಧಾರರಹಿತ ಮತ್ತು ಸತ್ಯಕ್ಕೆ ದೂರವಾದವು ಎಂದು ಸ್ಪಷ್ಟಪಡಿಸಿದೆ. ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಮೊಹಮ್ಮದ್ ಜಂಶೀದ್ ಎಂಬುವರು ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಒಂದನ್ನು ಹರಿಬಿಟ್ಟು, ತಮಗೆ ಕೆಲಸದ ಸ್ಥಳದಲ್ಲಿ ತೀವ್ರ ಅವಮಾನ ಮಾಡಲಾಗಿದೆ ಎಂದು ಆರೋಪಿಸಿದ್ದರು. ಟರ್ಮಿನಲ್ ಪರಿಶೀಲನೆ ವೇಳೆ ತಾವು ಯೂನಿಫಾರ್ಮ್ ಟೈ ಧರಿಸಲು ಮರೆತಿದ್ದಾಗಿ ಜಂಶೀದ್ ಒಪ್ಪಿಕೊಂಡಿದ್ದಾರೆ.

## ಅದ್ದೂರಿ ಜಗನ್ನಾಥ ರಥಯಾತ್ರೆ

• ಉದಯವಾಹಿನಿ, ಕೆ.ಆರ್.ಪುರ

ಶ್ರೀ ಜಗನ್ನಾಥ ಸ್ವಾಮಿಯ ಮೂರನೇ ವರ್ಷದ ರಥಯಾತ್ರೆ ಕಲ್ಕೆರೆಯ ಆಂಜನೇಯ ಸ್ವಾಮಿ ದೇವಾಲಯದಿಂದ ಹೊರಮಾವುವರೆಗೆ ಅದ್ದೂರಿ ರಥಯಾತ್ರೆ ನೇರವೇರಿತು. ರಥಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದ ಬೆಂಗಳೂರು ಪೂರ್ವ ಜಿಲ್ಲಾ ಅಧ್ಯಕ್ಷ ಡಿ.ಕೆ.ಮೋಹನ್ ಅವರು ಕೆ.ಆರ್. ಪುರದಲ್ಲಿ ಆಚರಿಸುತ್ತಿರುವ ರಥಯಾತ್ರೆ ಗ್ರಾಮದ ನಿವಾಸಿಗಳ ಯೋಗಕ್ಷೇಮ, ಸುಖ ಶಾಂತಿ ಹಾಗೂ ಭಗವಂತನ ಕೃಪೆ ಸಿಗಲೆಂದು ಪ್ರಾರ್ಥನೆ ಸಲ್ಲಿಸಿದರು.

ಪೂರಿ ಜಗನ್ನಾಥ್ ಯಾತ್ರೆಯಂತೆ ನಮ್ಮ ಕಲ್ಕೆರೆ ಹಾಗೂ ಹೊರಮಾವು ಗ್ರಾಮದಲ್ಲಿ ನಡೆಸುತ್ತಿರುವುದು ಸಂತಸದ ವಿಷಯ ಇದರಂತೆ ಮುಂದಿನ ದಿನಗಳಲ್ಲಿ ಮತ್ತಷ್ಟು ವಿಜೃಂಭಣೆಯಿಂದ ನೇರವೇರಲಿ ಎಂದು ನುಡಿದರು. ರಥೋತ್ಸವದಲ್ಲಿ ಕಲ್ಕೆರೆ,ಹೊರಮಾವು, ಹೊರಮಾವು ಅಗರ, ಜ್ಯೋತಿನಗರ, ಕಾವೇರಿನಗರ, ರಾಮಮೂರ್ತಿನಗರ, ಕೆ.ಆರ್ .ಪುರ,ವಿಜಿನಾಪುರ, ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಭಾಗವಹಿಸಿದ್ದರು.

# ಬಿಡದಿ ಟೌನ್ ಶಿಪ್ ಯೋಜನೆ ಹಣ ಹೈಕಮಾಂಡ್‌ಗೆ: BJP ನಾಯಕರ ಆರೋಪ

### ಪ್ಲೆಕಾರ್ಡ್‌ಗಳನ್ನು ಹಿಡಿದ ಪ್ರತಿಭಟನಾಕಾರರು ಕಾಂಗ್ರೆಸ್ ಸರ್ಕಾರವನ್ನು ರೈತ ವಿರೋಧಿ ಸರ್ಕಾರ ಎಂದು ಘೋಷಣೆವಿರೋಧಿ ಸರ್ಕಾರ ಎಂದು ಘೋಷಣೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿ ಸಮೀಪ ಪ್ರಸ್ತಾವಿತ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆಗಾಗಿ ರೈತರ ಭೂಸ್ವಾಧೀನಕ್ಕೆ ರಾಜ್ಯ ಸರ್ಕಾರ ಮುಂದಾಗಿರುವುದನ್ನು ಖಂಡಿಸಿ ಬಿಜೆಪಿ ಶುಕ್ರವಾರ ನಗರದ ಫ್ರೀಡಂ ಪಾರ್ಕ್ ನಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹಾಗೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪ್ರತಿಭಟನೆಗೆ ನೇತೃತ್ವ ವಹಿಸಿದ್ದರು.

ರೈತರು ಹಾಗೂ ಸ್ಥಳೀಯರ ತೀವ್ರ ವಿರೋಧದ ನಡುವೆಯೂ, ಭಾರತದ ಮೊದಲ ಕೃತಕ ಬುದ್ಧಿಮತ್ತೆ ಆಧಾರಿತ ಸಮಗ್ರ ಟೌನ್‌ಶಿಪ್ ಎಂದು ಬಿಂಬಿಸಲಾಗಿರುವ ಜಿಬಿಐಟಿ ಯೋಜನೆಗಾಗಿ ಭೂಸ್ವಾಧೀನದ ಅಂತಿಮ ಅಧಿಸೂಚನೆಗಳನ್ನು ಸರ್ಕಾರ ಹೊರಡಿಸಿರುವುದನ್ನು ಬಿಜೆಪಿ ಖಂಡಿಸಿತು.

ಪ್ರತಿಭಟನೆಯಲ್ಲಿ ಬಿಜೆಪಿ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಪಕ್ಷದ ಪದಾಧಿಕಾರಿಗಳು, ಜಿಲ್ಲಾ ಅಧ್ಯಕ್ಷರು ಹಾಗೂ ಕಾರ್ಯಕರ್ತರು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಬಿಡದಿ ಸುತ್ತಮುತ್ತಲಿನ ಗ್ರಾಮಗಳ ರೈತರೂ ಪ್ರತಿಭಟನೆಯಲ್ಲಿ ಪಾಲ್ಗೊಂಡರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬಿಡದಿ ಸ್ಯಾಟಲೈಟ್ ಟೌನ್‌ಶಿಪ್ ಯೋಜನೆಯನ್ನು ಯಾವುದೇ ಕಾರಣಕ್ಕೂ ಮುಂದುವರಿಸಬೇಕೆಂಬ ಹಠಕ್ಕೆ ಬಿದ್ದಿದ್ದಾರೆ. ಶೇ.80ಕ್ಕೂ ಹೆಚ್ಚು ರೈತರು ಈ ಯೋಜನೆಯನ್ನು ತೀವ್ರವಾಗಿ ವಿರೋಧಿಸುತ್ತಿದ್ದಾರೆ. ಮುಖ್ಯಮಂತ್ರಿ ಈ ಯೋಜನೆಯ ಬಗ್ಗೆ ಏಕೆ ಇಷ್ಟೊಂದು ಆಸಕ್ತಿ ತೋರಿಸುತ್ತಿದ್ದಾರೆ ಎಂದು ರೈತ ಸಮುದಾಯ ಪ್ರಶ್ನಿಸುತ್ತಿದೆ. ಸರ್ಕಾರ ಭೂಸ್ವಾಧೀನದ ಅಧಿಸೂಚನೆಯನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಬಿಡದಿ ಯೋಜನೆ ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಚಾರಕ್ಕಾಗಿ ರೂಪಿಸಿರುವ ರಿಯಲ್ ಎಸ್ಟೇಟ್ ಯೋಜನೆಯಾಗಿದೆ. ರಾಜ್ಯ ಚುನಾವಣೆಗೆ ಕೇವಲ ಆರು ತಿಂಗಳು ಬಾಕಿಯಿದೆ. ಡಿ.ಕೆ. ಶಿವಕುಮಾರ್ ಮತ್ತು ಕಾಂಗ್ರೆಸ್ ಹೈಕಮಾಂಡ್ ನಡುವೆ ಒಪ್ಪಂದವಾಗಿದೆ. ಈ ಯೋಜನೆಯ ಹಣ ಪಕ್ಷಕ್ಕೆ ಹೋಗಲಿದೆ. ಆದರೆ ಮುಖ್ಯ ವಿಷಯ ಅದು ಅಲ್ಲ ರೈತರ ಹಿತಾಸಕ್ತಿಯೇ ಮುಖ್ಯ ಎಂದು ಆರೋಪಿಸಿದರು. ಕಳೆದ ತಿಂಗಳು ರಾಮನಗರ ಮತ್ತು ಹರೋಹಳ್ಳಿ ತಾಲ್ಲೂಕಿನ ಮೂರು ಗ್ರಾಮಗಳ 499 ಎಕರೆ ಭೂಮಿಗೆ ಸಂಬಂಧಿಸಿದ ಮೊದಲ ಹಂತದ ಅಂತಿಮ ಭೂಸ್ವಾಧೀನ ಅಧಿಸೂಚನೆ ಹೊರಡಿಸಲಾಗಿತ್ತು. ರಾಮನಗರ ತಾಲ್ಲೂಕಿನ ನಾಲ್ಕು ಗ್ರಾಮಗಳ ವ್ಯಾಪ್ತಿಯ ಸುಮಾರು 4,940 ಎಕರೆ ಭೂಮಿಗೆ ಸಂಬಂಧಿಸಿದ ಎರಡನೇ ಹಂತದ ಅಂತಿಮ ಅಧಿಸೂಚನೆಯನ್ನೂ ಸರ್ಕಾರ ಪ್ರಕಟಿಸಿದೆ.



ಉದಯವಾಹಿನಿ ಚಿತ್ರ

ಮೂಲಗಳ ಪ್ರಕಾರ, ಈ ಯೋಜನೆಗೆ ಒಟ್ಟು 9,600 ಎಕರೆ ಭೂಮಿ ಅಗತ್ಯವಿದ್ದು, ಅದು ಒಂಬತ್ತು ಕಂದಾಯ ಗ್ರಾಮಗಳು ಹಾಗೂ 16 ಕಂದಾಯೇತರ ಗ್ರಾಮಗಳಲ್ಲಿ ವ್ಯಾಪಿಸಿದೆ.

ಸರ್ಕಾರ ಪ್ರತಿ ಎಕರೆಗೆ 2.30 ಕೋಟಿ ರೂಪಾಯಿ ದರ ನಿಗದಿಪಡಿಸಿದ್ದು, ಭೂಮಿಯಲ್ಲಿ ಬೆಳೆದಿರುವ ಬೆಳೆಗಳ ಆಧಾರದ ಮೇಲೆ ಹೆಚ್ಚುವರಿ ಪರಿಹಾರ ನೀಡುವ ಪ್ರಸ್ತಾವವೂ ಇದೆ ಎಂದು ಮೂಲಗಳು ತಿಳಿಸಿವೆ.

> ಭೂಸ್ವಾಧೀನ ವಿರೋಧಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದ ರೈತರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಕೂಡಲೇ ಹಿಂಪಡೆಯಬೇಕೆಂದು ಆಗ್ರಹಿಸಿದರು. -ಬಿಜೆಪಿ ನಾಯಕರು

> ಯೋಜನೆ ಪರ ಮತ್ತು ವಿರೋಧಿ ರೈತರ ನಡುವೆ ಕೆಲವೆಡೆ ಮುಖಾಮುಖಿ ಪರಿಸ್ಥಿತಿಯೂ ನಿರ್ಮಾಣವಾಗಿದೆ. ಇದಕ್ಕೆ ಮಧ್ಯೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರೈತರ ಭೂಮಿಯನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುವುದಿಲ್ಲ ಎಂದು ಭರವಸೆ ನೀಡಿದ್ದಾರೆ. ಡಿ.ಕೆ. ಶಿವಕುಮಾರ್



### ಯೋಜನೆ ಕುರಿತು ಪರಿಶೀಲಿಸಲು ಸಮಿತಿ ರಚನೆ

ಭೂಮಿ ನೀಡಲು ಇಚ್ಛಿಸದವರು ಕೃಷಿ ಮುಂದುವರಿಸಬಹುದು ಎಂದಿರುವ ಅವರು, ಯೋಜನೆ ಕುರಿತು ಪರಿಶೀಲಿಸಲು ಸಮಿತಿ ರಚಿಸಲಾಗುವುದು ಮತ್ತು ಅದರ ಶಿಫಾರಸುಗಳ ಆಧಾರದ ಮೇಲೆ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

### ಎಫ್ ಐ ಆರ್ ರದ್ದಿಗೆ ಹೈಕೋರ್ಟ್ ಮೊರೆ

ಬಿಡದಿಯ ರೈತರ ವಿರುದ್ಧ ರಾಜ್ಯ ಸರ್ಕಾರ ದಾಖಲಿಸಿರುವ ಎಫ್ಐಆರ್ ರದ್ದು ಕೋರಿ ಹೈಕೋರ್ಟ್ ಮೊರೆ ಹೋಗಲು ಜೆಡಿಎಸ್ ನಿರ್ಧಾರ ಮಾಡಿದೆ. ಜೆಡಿಎಸ್ ಕಾನೂನು ಘಟಕವು ರೈತರ ಪರವಾಗಿ ಗಟ್ಟಿಯಾಗಿ ನಿಂತಿದ್ದು, ಪ್ರದೀಪ್ ಅವರ ನೇತೃತ್ವದ ನಮ್ಮ ವಕೀಲರ ತಂಡವು ನ್ಯಾಯಾಲಯದಲ್ಲಿ ತಮ್ಮ ವಾದವನ್ನು ಪೂರ್ಣಗೊಳಿಸಿದ್ದು, ಮಧ್ಯಂತರ ಜಾಮೀನು ಆದೇಶವನ್ನು ನ್ಯಾಯಾಲಯವು 20 ಜುಲೈ 2026 ಕ್ಕೆ ಕಾಯ್ದಿರಿಸಿದೆ.

ನ್ಯಾಯಾಲಯದಿಂದ ನಮಗೆ ಖಂಡಿತವಾಗಿಯೂ ನ್ಯಾಯ ಸಿಗಲಿದೆ ಎಂಬ ಸಂಪೂರ್ಣ ಭರವಸೆ ನಮಗಿದೆ ಎಂದು ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಮಾಹಿತಿ ನೀಡಿದ್ದಾರೆ. ನಮ್ಮ ಕಾನೂನು ಹೋರಾಟದ ಮುಂದಿನ ಭಾಗವಾಗಿ, ಮುಂಬರುವ ಸೋಮವಾರದಂದು (ಜುಲೈ 20) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಈ ಎಫ್ಐಆರ್ ಅನ್ನು ರದ್ದುಗೊಳಿಸುವಂತೆ ಕೋರಿ ನಮ್ಮ ಕಾನೂನು ತಂಡದ ಮೂಲಕ ಅರ್ಜಿಯನ್ನು ಸಲ್ಲಿಸಲಿದ್ದೇವೆ. ನಾವು ಸದಾ ಬಿದದಿಯ ರೈತರ ಪರವಾಗಿ ನಿಲ್ಲಲಿದ್ದೇವೆ ಎಂದಿದ್ದಾರೆ.



- ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಬಿಡದಿ ಟೌನ್ ಶಿಪ್‌ಗಾಗಿ ರೈತರ ಭೂಮಿ ವಶಪಡಿಸಿಕೊಳ್ಳುವುದನ್ನು ವಿರೋಧಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಯಿತು.
- ಸರ್ಕಾರಕ್ಕೆ ಬಲಗಾಲದಿಂದ ಸಂಕಷ್ಟ ಅನುಭವಿಸುತ್ತಿರುವ ಜನರ ಬಗ್ಗೆ ಚಿಂತೆ ಇಲ್ಲ. ಆದರೆ ಬಿಡದಿ ಟೌನ್ ಶಿಪ್ ಬಗ್ಗೆ ಚಿಂತೆ ಬಿಡಲು ಸಿಎಂ ಡಿಕೆ ಶಿವಕುಮಾರ್ ಸಿದ್ದರಿಲ್ಲ
- ಬಿಡದಿಯ ರೈತರ ವಿರುದ್ಧ ರಾಜ್ಯ ಸರ್ಕಾರ ದಾಖಲಿಸಿರುವ ಎಫ್ಐಆರ್ ರದ್ದು ಕೋರಿ ಹೈಕೋರ್ಟ್ ಮೊರೆ ಹೋಗಲು ಜೆಡಿಎಸ್ ನಿರ್ಧಾರ ಮಾಡಿದೆ.

### ಬಿಡದಿ ಟೌನ್‌ಶಿಪ್ ಜಟಾಪಟಿ

ಸರ್ಕಾರದ ವಿರುದ್ಧ ಬಿಜೆಪಿ ಅಖಾಡಕ್ಕೆ, ಫ್ರೀಡಂ ಪಾರ್ಕ್‌ನಲ್ಲಿ ರೈತರ ಕಮಲ ಧ್ವನಿ

## ವಾಂಗ್ಚುಕ್ ಆರೋಗ್ಯ ನಿರ್ಲಕ್ಷ್ಯ ಖಂಡಿಸಿ ಕೈ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳು ಮಾಡುತ್ತಿರುವ ನಿರಂತರ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ಹಾಗೂ ವಿದ್ಯಾರ್ಥಿಗಳ ಪರವಾಗಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿಜ್ಞಾನಿ ಸೋನಂ ವಾಂಗ್ಚುಕ್ ಅವರ ಆರೋಗ್ಯದ ಬಗ್ಗೆ ಕೇಂದ್ರ ಸರ್ಕಾರ ತಾಳಿರುವ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ, ಇಂದು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್, ದೇಶದಲ್ಲಿ ಪದೇ ಪದೇ ನಡೆಯುತ್ತಿರುವ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆಗಳು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ, ಪರಿಶ್ರಮ ಮತ್ತು ಆತ್ಮವಿಶ್ವಾಸವನ್ನು ಹಾಳು ಮಾಡಿವೆ. ಈ ವೈಫಲ್ಯದ ಸಂಪೂರ್ಣ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ತಕ್ಷಣವೇ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ವಿದ್ಯಾರ್ಥಿಗಳಿಗೆ ಪಾರದರ್ಶಕ, ನ್ಯಾಯಸಮ್ಮತ ಮತ್ತು ವಿಶ್ವಾಸಾರ್ಹ ಪರೀಕ್ಷಾ ವ್ಯವಸ್ಥೆಯನ್ನು ಒದಗಿಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಕುರಿತು ಸಮಗ್ರ, ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

> ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಕ್ಷಣವೇ ಮಧ್ಯಪ್ರವೇಶಿಸಿ, ಸೋನಂ ವಾಂಗ್ಚುಕ್ ಅವರ ಜೀವ ರಕ್ಷಿಸಲು ಅಗತ್ಯ ಕ್ರಮ ಕೈಗೊಂಡು, ಅವರು ಎತ್ತಿರುವ ವಿಷಯಗಳ ಕುರಿತು ಪ್ರಜಾಪ್ರಭುತ್ವದ ಚರ್ಚೆ ಆರಂಭಿಸಬೇಕು. ಶಾಂತಿಯುತ ವಾಗಿ ಪ್ರತಿಭಟನೆ ನಡೆಸುವವರ ಧ್ವನಿಯನ್ನು ಆಲಿಸುವುದೇ ಪ್ರಜಾಪ್ರಭುತ್ವದ ನಿಜವಾದ ಮೌಲ್ಯ ಎಂದು ಅಭಿಪ್ರಾಯಪಟ್ಟರು. -ಎಸ್. ಮನೋಹರ್

ವಿದ್ಯಾರ್ಥಿಗಳ ಹಿತಾಸಕ್ತಿಗಾಗಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿಜ್ಞಾನಿ ಸೋನಂ ವಾಂಗ್ಚುಕ್ ಅವರ ಹೋರಾಟವು ದೇಶದ ವಿದ್ಯಾರ್ಥಿಗಳು ಹಾಗೂ ನಾಗರಿಕರ ಆತಂಕವನ್ನು ಪ್ರತಿಬಿಂಬಿಸುತ್ತದೆ. ಕೇಂದ್ರ ಸರ್ಕಾರ ಮೌನವಹಿಸುವ ಬದಲು ಅವರೊಂದಿಗೆ ಪ್ರಜಾಪ್ರಭುತ್ವದ ರೀತಿಯಲ್ಲಿ ರಚನಾತ್ಮಕ ಸಂವಾದ ನಡೆಸಬೇಕು ಎಂದು ಹೇಳಿದರು.

## ಮೆಡಾಲ್ ಕ್ಲುಮ್ಯಾಕ್ಸ್ ಜಯನಗರ ಕೇಂದ್ರ ಮರು ಉದ್ಘಾಟನೆ


• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಯು.ಟಿ. ಖಾದರ್ ಅವರು ಮೆಡಾಲ್ ಕ್ಲುಮ್ಯಾಕ್ಸ್ ಡಯಾಗ್ನೋಸ್ಟಿಕ್ಸ್ ನ ನವೀಕೃತ ಜಯನಗರ ಕೇಂದ್ರವನ್ನು ಉದ್ಘಾಟಿಸಿದರು. ಜಿಇಸಿಗ್ನಾ ಎಕ್ಸ್‌ಪ್ಲೋರರ್ 1.5 ಟೆಸ್ಲಾ ಎಂಆರ್‌ಐ ಸಿಸ್ಟಮ್ ಸೇರಿದಂತೆ ಸುಧಾರಿತ ರೋಗನಿರ್ಣಯ ಸೌಲಭ್ಯಗಳನ್ನು ಹೊಂದಿರುವ ಈ ಕೇಂದ್ರವು ವಿಶ್ವಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸಲಿದೆ. ಆರೋಗ್ಯ ಕ್ಷೇತ್ರದಲ್ಲಿ ತಂತ್ರಜ್ಞಾನದ ಬಳಕೆ ರೋಗಿಗಳಿಗೆ ವೇಗವಾದ , ನಿಖರವಾದ ರೋಗ ನಿರ್ಣಯಕ್ಕೆ ಸಹಕಾರಿಯಾಗಲಿದೆ ಎಂದು ಸಚಿವರು ತಿಳಿಸಿದರು. ಮೆಡಾಲ್ ಕ್ಲುಮ್ಯಾಕ್ಸ್ ಡಯಾಗ್ನೋಸ್ಟಿಕ್ಸ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜೆ. ಬಾಲಕೃಷ್ಣನ್ ಮಾತನಾಡಿ, 'ಜಯನಗರ ಕೇಂದ್ರದ ಆಧುನೀಕರಣದ ಮೂಲಕ ಅತ್ಯುತ್ತಮ ಡಯಾಗ್ನೋಸ್ಟಿಕ್ ಸೇವೆಗಳು, ರೋಗಿ-ಕೇಂದ್ರಿತ ಆರೈಕೆ ಹಾಗೂ ವಿಶ್ವಾಸಾರ್ಹ ಆರೋಗ್ಯ ಸೇವೆಯನ್ನು ಜನರಿಗೆ ತಲುಪಿಸುವುದು .

## ಜಿಬಿಎ ಮುಖ್ಯ ಆರೋಗ್ಯಾಧಿಕಾರಿಯಾಗಿ ಡಾ. ಬಿ.ನಂದಿನಿ ಕಾನೂನು ಬಾಹಿರ ನಿಯೋಜನೆ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಯ ಆರೋಗ್ಯ ವೈದ್ಯಾಧಿಕಾರಿ ಉಪಆರೋಗ್ಯಾಧಿಕಾರಿ ಮತ್ತು ಆರೋಗ್ಯಾಧಿಕಾರಿಗಳಿಗೆ ಶೇ 25% ರಷ್ಟು ಹುದ್ದೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಯಲ್ಲಿ ಮೀಸಲಿಡಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್‌ರವರು ಅಪರ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ಮನವಿ ಸಲ್ಲಿಸಿದರು.


ಉದಯವಾಹಿನಿ ಚಿತ್ರ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಕಾನೂನು ಬಾಹಿರವಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಅರ್ಹತೆ ಇಲ್ಲದ ಕಿರಿಯ ಶ್ರೇಣಿಯ ಮುಖ್ಯ ಆರೋಗ್ಯಾಧಿಕಾರಿ ಡಾ. ನಂದಿನಿ. ಬಿ, ಸಹಾಯಕ ನಿರ್ದೇಶಕರು-2 ರವರನ್ನು ಕಾನೂನು ಬಾಹಿರವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದಲೇ ವರ್ಗಾಹಿಸಿ ನಿಯೋಜಿಸಲಾಗಿರುತ್ತದೆ.ಸದರಿ ಇಲಾಖೆ ರವರು ಯಾವುದೇ ಅಧಿಕಾರಿಗಳನ್ನು ಪಾಲಿಕೆಗೆ ಎರವಲು ಸೇವೆ ಮೇಲೆ ನಿಯೋಜಿಸಬೇಕಾಗಿದಲ್ಲಿ ಅಪರ ಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಅಥವಾ ಮಾನ್ಯ ಮುಖ್ಯ ಆಯುಕ್ತರು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರವರ ಸುಪರ್ದಿಗೆ/ ವಶಕ್ಕೆ/ ಸ್ವಾಧೀನಕ್ಕೆ ನೀಡಬೇಕಾಗಿರುತ್ತದೆ.ಡಾ|| ನಂದಿನಿ.ಬಿ ಮುಖ್ಯ ಆರೋಗ್ಯಾಧಿಕಾರಿ ಕಿರಿಯ ವೇತನ ಶ್ರೇಣಿ ರವರು 17 ವರ್ಷಗಳು ಮಾತ್ರ ಸೇವೆ ಸಲ್ಲಿಸಿರುವುದಾಗಿ ತಿಳಿದು ಬಂದಿರುತ್ತದೆ. ಆದರೆ ಪಾಲಿಕೆಯ ಆರೋಗ್ಯಾಧಿಕಾರಿಗಳು ಹಿರಿಯ ಶ್ರೇಣಿ ಆರೋಗ್ಯಾಧಿಕಾರಿಗಳಾಗಿದ್ದು ಸುಮಾರು 25 ವರ್ಷಗಳಿಗೂ ಮೇಲ್ಪಟ್ಟು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಯಲ್ಲಿ ಸೇವೆ ಸಲ್ಲಿಸಿರುತ್ತಾರೆ. ಆದ್ದರಿಂದ ಡಾ. ನಂದಿನಿ, ಬಿ ಮುಖ್ಯ ಆರೋಗ್ಯಾಧಿಕಾರಿ ರವರನ್ನು ಕಾನೂನು ಬಾಹಿರವಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪಾಲಿಕೆಗೆ ನಿಯೋಜಿಸಿರುವ ಆದೇಶವನ್ನು ಹಿಂಪಡೆಯಲು ಕೋರಲಾಗಿದೆ.

ಕೆಲವು ಎರವಲು ಸೇವೆ ಮೇಲೆ ನಿಯೋಜಿಸಿರುವ ಆರೋಗ್ಯ ವೈದ್ಯಾಧಿಕಾರಿಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರು ಪಾಲಿಕೆ ವತಿಯಿಂದ ಖಾಲಿ ಹುದ್ದೆಗಳ ವಿವರ ಪಡೆಯದೆ ಏಕಾಏಕಿ ಆರೋಗ್ಯ ವೈದ್ಯಾಧಿಕಾರಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿರುವುದು ಅಲ್ಲದೆ ಪಾಲಿಕೆ ಆರೋಗ್ಯ ವೈದ್ಯಾಧಿಕಾರಿ ಸಿ.ವಿ.ರಾಮನ್ ನಗರ ರವರ ಸ್ಥಳಕ್ಕೆ ನಿಯೋಜಿಸಿರುವುದು ಸಹ ಕಾನೂನು ಬಾಹಿರ ಮತ್ತು ಗೊಂದಲಕ್ಕೆ ಕಾರಣವಾಗಿರುತ್ತದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರಿಗೆ ಎರಲು ಸೇವೆ ಮೇಲೆ ಆರೋಗ್ಯಾಧಿಕಾರಿಗಳನ್ನು ನಿಯೋಜಿಸಬೇಕಾಗಿದಲ್ಲಿ ಅಪರ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ಅಥವಾ ಮಾನ್ಯ ಮುಖ್ಯ ಆಯುಕ್ತರು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರವರ ಸುಪರ್ದಿಗೆ/ವಶಕ್ಕೆ/ ಸ್ವಾಧೀನಕ್ಕೆ ನೀಡಬೇಕಾಗಿರುತ್ತದೆ. ಆದ್ದರಿಂದ ಉಲ್ಲೇಖ (1) ರ ರೀತಿ ಕಾನೂನು ಬಾಹಿರವಾಗಿ ಹೊರಡಿಸಿರುವ ಆದೇಶವನ್ನು ಕೂಡಲೇ ಹಿಂಪಡೆಯಲು ಈ ಮೂಲಕ ಕೋರಲಾಗಿದೆ. ಮುಂದುವರೆದಂತೆ ಇನ್ನು ಮುಂದೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಯ ಆರೋಗ್ಯ ವೈದ್ಯಾಧಿಕಾರಿ ಉಪ ಆರೋಗ್ಯಾಧಿಕಾರಿ ಮತ್ತು ಆರೋಗ್ಯಾಧಿಕಾರಿಗಳಿಗೆ ಶೇ.25% ರಷ್ಟು ಹುದ್ದೆಯನ್ನು ಇಚ್ಛೆಯುಳ್ಳವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಯಲ್ಲಿ ಮೀಸಲಿಡಲು ಈ ಮೂಲಕ ಕೋರಲಾಗಿದೆ.


# ಕೆ.ಆರ್.ಮಾರುಕಟ್ಟೆಯ ಅಕ್ರಮ ಮಳಿಗೆಗಳನ್ನು ಎರಡು ವಾರದಲ್ಲಿ ತೆರವುಗೊಳಿಸಿ: ಹೈಕೋರ್ಟ್ ಸೂಚನೆ

### ಅಕ್ರಮವಾಗಿ ನಿರ್ಮಿಸಿಕೊಂಡಿರುವ ಅಂಗಡಿಗಳ ಜಾಗವನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಬಿಟ್ಟುಕೊಡುವಂತೆ ಹೈಕೋರ್ಟ್ ಸೂಚಿಸಿದೆ

• ಉದಯವಾಹಿನಿ, ಬೆಂಗಳೂರು

ನಗರದ ಕೆ.ಆರ್.ಮಾರುಕಟ್ಟೆ ಮೈಸೂರು ರಸ್ತೆಯ ಮೇಲ್ಸೇತುವೆ ಕೆಳಗಡೆ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ಅಕ್ರಮವಾಗಿ ನಿರ್ಮಿಸಿಕೊಂಡಿರುವ ಅಂಗಡಿಗಳ ಜಾಗವನ್ನು ಮುಂದಿನ ಎರಡು ವಾರಗಳಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಬಿಟ್ಟುಕೊಡಬೇಕು ಎಂದು ಹೈಕೋರ್ಟ್ ಸೂಚನೆ ನೀಡಿದೆ. ಕೆ.ಆರ್.ಮಾರುಕಟ್ಟೆಯಲ್ಲಿ, ಮೇಲ್ಸೇತುವೆ ಕೆಳಭಾಗದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ) ನಡೆಸಿದ ಒತ್ತುವರಿ ತೆರವು ಕಾರ್ಯಾಚರಣೆ ಪ್ರಶ್ನಿಸಿ, ಮಳಿಗೆ ಮಾಲೀಕರಾದ ಸ್ಯಾಮ್ಯುಯಲ್ ಎಂಬವರು ಸೇರಿದಂತೆ ಮತ್ತಿತರರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ.ಶ್ಯಾಮ್‌ಪ್ರಸಾದ್ ಅವರಿದ್ದ ನ್ಯಾಯಪೀಠ ಈ ಎಚ್ಚರಿಕೆ ನೀಡಿದ್ದು, ವಿಚಾರಣೆಯನ್ನು ನಾಳೆಗೆ ಮುಂದೂಡಿದೆ.

ವಿಚಾರಣೆಯ ವೇಳೆ, ಸರ್ಕಾರದ ಪರ ವಕೀಲರು, ಅರ್ಜಿದಾರರ ಅಕ್ರಮ ಮಳಿಗೆಗಳಿಗೆ ಬಿಬಿಎಂಪಿ ಯಾವುದೇ ಪರವಾನಗಿನೀಡಿಲ್ಲ. ಲೆಸೆನ್‌ನಲ್ಲಿರುವ ಸಹಿಯನ್ನು ಸಂಬಂಧಪಟ್ಟ ಕಂದಾಯ ಅಧಿಕಾರಿ ಮಾಡಿಲ್ಲ. ಆದ್ದರಿಂದ ಇದರಿಂದ ಅಂಗಡಿಯನ್ನು ತೆರವುಗೊಳಿಸಲು ಹಾಗೂ ವಿದ್ಯುತ್ ಮೀಟರ್ ಹಿಂತಿರುಗಿಸಲು ನಿರ್ದೇಶನ ನೀಡಬೇಕು ಎಂದು ಪ್ರಮಾಣ ಪತ್ರ ಸಲ್ಲಿಸಿದರು.ಈ ಅಂಶವನ್ನು ದಾಖಲಿಸಿಕೊಂಡ ನ್ಯಾಯಪೀಠ, ಅಕ್ರಮ ಮಳಿಗೆಗಳ ಮಾಲೀಕರು ಮುಂದಿನ ಎರಡು ವಾರದಲ್ಲಿ ಜಿಬಿಎಗೆ ಬಿಟ್ಟುಕೊಡಬೇಕು. ಎರಡು ವಾರದಲ್ಲಿ ಜಾಗದ ಸ್ವಾಧೀನ ಬಿಟ್ಟುಕೊಡದೇ ಇದ್ದಲ್ಲಿ, ಜಿಬಿಎ ವತಿಯಿಂದ ಮಳಿಗೆಗಳನ್ನು ನೆಲಸಮಗೊಳಿಸಲು ಸಂಪೂರ್ಣ ಸ್ವಾತಂತ್ರ್ಯವಿರಲಿದೆ ಎಂದು ಹೇಳಿದೆ.ಜೊತೆಗೆ, ಮಳಿಗೆಗಳಿಗೆ ಬದಲಿ ಜಾಗ ಒದಗಿಸಲು ಅರ್ಜಿದಾರರು ನಾಲ್ಕು ವಾರದಲ್ಲಿ ಮನವಿ ಸಲ್ಲಿಸಬಹುದು. ಆ ಮನವಿಯನ್ನು ಜಿಬಿಎ ಕಾನೂನು ಪ್ರಕಾರ ಪರಿಗಣಿಸಬೇಕು ಎಂದು ಹೈಕೋರ್ಟ್ ನಿರ್ದೇಶನ ನೀಡಿದೆ.



ಉದಯವಾಹಿನಿ ಚಿತ್ರ

**ಪ್ರಕರಣದ ಹಿನ್ನೆಲೆ:** ಕೆ.ಆರ್.ಮಾರುಕಟ್ಟೆಯ ಸುತ್ತಲಿನ ಪಾದಚಾರಿ ಮಾರ್ಗಗಳಲ್ಲಿ ಹಣ್ಣು ಮತ್ತು ತರಕಾರಿ ವ್ಯಾಪಾರ ಮಾಡುತ್ತಿರುವ ಕ್ರಮವನ್ನು ಪ್ರಶ್ನಿಸಿ ಅರ್ಜಿದಾರರಾದ ಸ್ಯಾಮ್ಯುಯಲ್, ಎಂ.ಸುಧಾಕರ್, ಕೆ.ಮಂಜು, ಸುಶೀಲಾ, ಆರ್.ನಳಿನಿ ಮತ್ತು ಎಸ್.ದಿವ್ಯಾ ಎಂಬವರು ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸಿದ್ದರು.ಅರ್ಜಿಯಲ್ಲಿ ತಮ್ಮ ಬಳಿ ಬಿಬಿಎಂಪಿ ನೀಡಿರುವ ಸಿಂಧುತ್ವ ಹೊಂದಿರುವ ಅಧಿಕೃತ ವ್ಯಾಪಾರ ಪರವಾನಗಿ, ನಿಯಮ ಬದ್ಧವಾಗಿ ಬೆಸ್ಕಾಂ ವಿದ್ಯುತ್ ಸಂಪರ್ಕ ನೀಡಲಾಗಿದೆ. ಆದರೆ, ಜಿಬಿಎ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಯ ಜೆಸಿಬಿಗಳಿಂದ ಅಂಗಡಿಗಳನ್ನು ನೆಲಸಮಗೊಳಿಸಿದ್ದಾರೆ. ಈ ಸಂದರ್ಭದಲ್ಲಿ ದಾಖಲೆಗಳನ್ನು ತೋರಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಅಲ್ಲದೆ, ಈ ಸಂಬಂಧ ಕಾನೂನುಬದ್ಧವಾಗಿ ನೀಡಬೇಕಾದ ಕಾರಣ ಕೇಳಿ ನೋಟಿಸ್ ಅಥವಾ ತೆರವು ಆದೇಶದ ಪ್ರತಿಯನ್ನು ತೋರಿಸಲು ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ.

### ಕಾನೂನುಬದ್ಧವಾಗಿ ವ್ಯಾಪಾರ

**ಕಾನೂನುಬಾಹಿರ ಎಂದು ವಿವರಿಸಿದ್ದಾರೆ. ಜೊತೆಗೆ, ಅಂಗಡಿಗೆ ನಿಯಮಿತವಾಗಿ ವಿದ್ಯುತ್ ಬಿಲ್ ಪಾವತಿಸುತ್ತಾ, ಸರ್ಕಾರದ ನಿಯಮಗಳನ್ನು ಪಾಲಿಸಿಕೊಂಡು ಕಾನೂನುಬದ್ಧವಾಗಿ ವ್ಯಾಪಾರ ಮಾಡುತ್ತಿದ್ದೆ. ಇತ್ತೀಚೆಗಷ್ಟೇ ಹೊಸ ಮೀಟರ್ ಕೂಡ ಅಳವಡಿಸಲಾಗಿತ್ತು. ಆದರೆ ಅಧಿಕಾರಿಗಳು ನನ್ನ ಜೀವನದ ಆಧಾರವಾಗಿದ್ದ ಅಂಗಡಿಯನ್ನು ಧ್ವಂಸಗೊಳಿಸಿದ್ದಾರೆ. ಅಂಗಡಿಯಲ್ಲಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಹಣ್ಣು, ತರಕಾರಿ ಸ್ಟಾಕ್, ಪೀಠೋಪಕರಣ ಹಾಗೂ ಪ್ರಮುಖ ದಾಖಲೆಗಳು ಜೆಸಿಬಿ ಅಬ್ಬರಕ್ಕೆ ಸಿಲುಕಿ ನಾಶವಾಗಿವೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಪ್ರವಾಸ-ಪಾರ್ಟಿಗಳು ಮತ್ತು ಆನಂದ ವಿಹಾರಗಳು ಇಂದು ನಿಮ್ಮನ್ನು ಉತ್ತಮ ಮೂಡ್‌ನಲ್ಲಿಡುತ್ತವೆ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಇತರರಿಗೆ ಮುಜುಗರ ಉಂಟುಮಾಡಬೇಡಿ

**ವೃಷಭ** ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಮಕ್ಕಳು ಹೆಚ್ಚು ಗಮನ ಬಯಸಿದರೂ ಬೆಂಬಲ ಮತ್ತು ಕಾಳಜಿಯಿಂದ ವರ್ತಿಸುತ್ತಾರೆ.

**ಮಿಥುನ** ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ.

**ಕರ್ಕಾಟಕ** ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಪ್ರಮುಖ ಜನರು ವಿಶೇಷವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಕುಟುಂಬದಲ್ಲಿ ತೊಂದರೆಯುಂಟಾಗಬಹುದು.

**ಸಿಂಹ** ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ. ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ.

**ಕನ್ಯಾ** ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ.

**ತುಲಾ** ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ಪ್ರೀತಿಪಾತ್ರರು ನಿಮ್ಮಿಂದ ಏನು ಬೇಕಾದರೂ ಬೇಡಿಕೊಳ್ಳಬಹುದು ಅದನ್ನು ಪೂರೈಸಲು ಸಾಧ್ಯವಾಗುವುದಿಲ್ಲ, ಇದರಿಂದಾಗಿ ನಿಮ್ಮ ಪ್ರೀತಿಪಾತ್ರರು ನಿಮ್ಮ ಮೇಲೆ ಕೋಪಗೊಳ್ಳಬಹುದು.

**ವೃಶ್ಚಿಕ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಮಕ್ಕಳೊಂದಿಗೆ ಸಮಯ ಕಳೆಯುವುದು ಮುಖ್ಯ. ವಿಭಿನ್ನ ರೀತಿಯ ಪ್ರಣಯವನ್ನು ಅನುಭವಿಸುವ ಸಾಧ್ಯತೆಯಿದೆ.

**ಧನಸ್ಸು** ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ನಿಮ್ಮ ಹತ್ತಿರ ಸಮಯ ಉಳಿದಿರುತ್ತದೆ ಆದರೆ ಇದರ ಹೊರತಾಗಿಯೂ, ನಿಮ್ಮನ್ನು ಸಮಾಧಾನಗೊಳಿಸುವ ಯಾವುದೇ ಕೆಲಸವನ್ನು ನೀವು ಮಾಡಲಾಗುವುದಿಲ್ಲ ನೀವು ಪರಸ್ಪರರ ಸುಂದರ ಭಾವನೆಗಳ ಜೊತೆ ನಿಕಟ ಸಂಪರ್ಕ ಹೊಂದಿರುತ್ತೀರಿ.

**ಮಕರ** ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಬುದ್ಧಿವಂತ ಹೂಡಿಕೆಗಳು ಮಾತ್ರ ಆದಾಯಗಳನ್ನು ನೀಡುತ್ತವೆ- ಆದ್ದರಿಂದ ನೀವು ಕಷ್ಟಪಟ್ಟು ಗಳಿಸಿದ ನಿಮ್ಮ ಹಣವನ್ನು ಎಲ್ಲಿ ಹೂಡಬಯಸುತ್ತೀರೆನ್ನುವಲ್ಲಿ ಖಚಿತತೆಯಿರಲಿ.

**ಕುಂಭ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಸಂಬಂಧಿಗಳು / ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ.

**ಮೀನ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ನೀವು ಹಣದ ಲಾಭವನ್ನು ಪಡೆಯಬಹುದು. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

## ಇಬ್ಬರು ಸಹೋದರರ ಬರ್ಬರ ಕೊಲೆ: ಹಳೆ ದ್ವೇಷಕ್ಕೆ ಬೀಗರಿಂದಲೇ ದುಷ್ಕೃತ್ಯ!

**• ಉದಯವಾಹಿನಿ ಬೆಳಗಾವಿ:**

ಕೌಟುಂಬಿಕ ವಿಚಾರಕ್ಕೆ ಸಂಬಂಧಿಸಿದಂತೆ ಇಬ್ಬರು ಸಹೋದರರನ್ನು ಅವರ ಬೀಗರೇ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಯರಗಟ್ಟಿ ತಾಲ್ಲೂಕಿನ ನುಗ್ಗಾನಟ್ಟಿ ಗ್ರಾಮದಲ್ಲಿ ರಾತ್ರಿ ನಡೆದಿದೆ. ನುಗ್ಗಾನಟ್ಟಿ ಗ್ರಾಮದ ಬಸಪ್ಪ ಫಕ್ಕೀರಪ್ಪ ರಾಯಣ್ಣವರ (35) ಹಾಗೂ ಲಗಮಪ್ಪ ಫಕ್ಕೀರಪ್ಪ ರಾಯಣ್ಣವರ (34) ಕೊಲೆಯಾದ ಸಹೋದರರು.

ಕೌಟುಂಬಿಕ ವಿಚಾರಕ್ಕೆ ಸಂಬಂಧಿಸಿದಂತೆ ಸಂಬಂಧಿಕರ ನಡುವೆ ಜಗಳ ಶುರುವಾಗಿ, ಅದು ವಿಕೋಪಕ್ಕೆ ತಿರುಗಿ ಇಬ್ಬರ ಕೊಲೆಯಲ್ಲಿ ಅಂತ್ಯವಾಗಿದೆ ಎರಡು ಕುಟುಂಬಗಳ ನಡುವೆ ಹಳೆ ದ್ವೇಷವಿದ್ದು, ಇದರಿಂದಲೇ ಆರು ಜನರು ಸೇರಿಕೊಂಡು ಕೊಲೆ ಮಾಡಿರುವುದಾಗಿ ಪ್ರಾಥಮಿಕ ಮಾಹಿತಿಯಿಂದ ತಿಳಿದು ಬಂದಿದೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಆರ್.ಬಿ.ಬಸರಗಿ, ಮುರಗೋಡ ಸಿಪಿಐ ಐ.ಎಂ.ಮಠಪತಿ, ಪಿಎಸ್ಐ ಎಲ್.ಬಿ.ಮಾಳಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಕೊಲೆ ಸಂಬಂಧ ಮುರಗೋಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ. ಜೋಡಿ ಕೊಲೆಯಿಂದ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ. ಅಲ್ಲದೇ ಮೃತರ ಸಂಬಂಧಿಕರು ಆಘಾತಗೊಂಡಿದ್ದಾರೆ.

## ಮದುವೆಯಾದ ಕೆಲವೇ ಗಂಟೆಗಳಲ್ಲಿ ವರನ ಹತ್ಯೆ

**• ಉದಯವಾಹಿನಿ ಬಳ್ಳಾರಿ:**

ಮದುವೆ ಹಾಗೂ ಆರತಕ್ಷತೆ ಸಂಭ್ರಮದಲ್ಲಿದ್ದ ಕುಟುಂಬಕ್ಕೆ ಕೆಲವೇ ಗಂಟೆಗಳಲ್ಲಿ ಆಘಾತ ಎದುರಾಗಿದೆ. ಮದುವೆಯಾದ ದಿನವೇ ನವವಿವಾಹಿತ ವರನನ್ನು ದುಷ್ಕರ್ಮಿಗಳು ಹತ್ಯೆ ಮಾಡಿರುವ ಘಟನೆ ನಗರದ 29ನೇ ವಾರ್ಡ್‌ನ ಬಟ್ಟಿ ಏರಿಯಾದ ಸಮತಾ ನಗರದಲ್ಲಿ ನಡೆದಿದೆ. ಮೃತನನ್ನು ನಬಿ ರಸೂಲ್ ಎಂದು ಗುರುತಿಸಲಾಗಿದೆ. ಈತ ಬೋಟ ಮಾರ್ಕೆಟ್‌ನಲ್ಲಿ ಮತ್ತು ಗಾರೆ ಕೆಲಸವ ಮಾಡುತ್ತಿದ್ದರು. ಪೊಲೀಸರ ಪ್ರಾಥಮಿಕ ಮಾಹಿತಿಯ ಪ್ರಕಾರ, ಸುಮಾರು 15 ದಿನಗಳ ಹಿಂದೆ ವಿಚ್ಛೇದನ ಪಡೆದಿದ್ದ ಮಹಿಳೆಯನ್ನು ನಬಿ ರಸೂಲ್ ಪ್ರೀತಿಸಿ ಕರೆದುಕೊಂಡು ಹೋಗಿದ್ದರು. ಬಳಿಕ ಇಬ್ಬರೂ ಮನೆಗೆ ಮರಳಿ, ಕುಟುಂಬದವರ ಒಪ್ಪಿಗೆಯೊಂದಿಗೆ ಮದುವೆ ಹಾಗೂ ಆರತಕ್ಷತೆ ಕಾರ್ಯಕ್ರಮ ನಡೆಸಲಾಗಿತ್ತು. ಆರತಕ್ಷತೆ ಮುಗಿದ ಬಳಿಕ ರಾತ್ರಿ ಸುಮಾರು 11.30ರ ವೇಳೆಗೆ ಗೆಳೆಯನಿಂದ ಕರೆ ಬಂದಿದೆ ಎಂದು ಹೇಳಿ ನಬಿ ರಸೂಲ್ ಮನೆಯಿಂದ ಹೊರಟಿದ್ದರು. ಆದರೆ, ಆತ ವಾಪಸ್ ಮನೆಗೆ ಬಂದಿರಲಿಲ್ಲ. ನಂತರ ತಡರಾತ್ರಿ ಸುಮಾರು 2 ಗಂಟೆ ವೇಳೆಗೆ, ಮನೆಯಿಂದ ಸುಮಾರು 700 ಮೀಟರ್ ದೂರದಲ್ಲಿ ರಕ್ತದ ಮಡುವಿನಲ್ಲಿ ಆತನ ಮೃತದೇಹ ಪತ್ತೆಯಾಗಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಮನ್ ಪನ್ನೆಕರ್, ಡಿವೈಎಸ್‌ಪಿ ಸ್ವನದಾಳ ಹಾಗೂ ಇತರ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪೊಲೀಸರು ಸ್ಥಳ ಮಹಜರು ನಡೆಸಿ ಸಾಕ್ಷ್ಯಗಳನ್ನು ಸಂಗ್ರಹಿಸಿದ್ದು, ಆರೋಪಿಗಳ ಪತ್ತೆಗೆ ತನಿಖೆ ಆರಂಭಿಸಿದ್ದಾರೆ.

## ಮತ್ತೋರ್ವ ಅಪ್ರಾಪ್ತೆಗೂ ಮಗು ಜನನ

**• ಉದಯವಾಹಿನಿ ಹುಬ್ಬಳ್ಳಿ:**

ಇತ್ತೀಚೆಗೆ 14 ವರ್ಷದ ಬಾಲಕಿ ತಾಯಿಯಾದ ಬೆನ್ನಲ್ಲೇ, ಮತ್ತೋರ್ವ ಅಪ್ರಾಪ್ತೆಗೆ ಹೆರಿಗೆಯಾಗಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಅತ್ಯಾಚಾರದಿಂದಾಗಿ ಗರ್ಭಿಣಿಯಾಗಿದ್ದ ಬಾಲಕಿ ಮಗುವಿಗೆ ಜನ್ಮ ನೀಡಿದ್ದಲ್ಲದೆ, ಶಿಶುವನ್ನು ಸಂಬಂಧಿಗಳ ನೆರವಿನೊಂದಿಗೆ ಮಾರಾಟ ಮಾಡಿರುವ ಶಂಕೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಕುರಿತು ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಷನರ್ ಎನ್.ಶಶಿಕುಮಾರ್ ಮಾಹಿತಿ ನೀಡಿ, ಈ ಹಿಂದೆಯೂ ಕೂಡ ಶಹರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಪ್ರಾಪ್ತಳು ಮಗುವಿಗೆ ಜನ್ಮ ನೀಡಿರುವ ಬಗ್ಗೆ ಮಾಹಿತಿ ಲಭ್ಯವಾಗುತ್ತಿದ್ದಂತೆ ಪೋಕ್ಸೋ ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ. ತನಿಖೆ ನಡೆಸುವಾಗ ಅದೇ ಕುಟುಂಬದ ಸಹೋದರಿಯ ಮಗಳೂ ಕೂಡ ಅಪ್ರಾಪ್ತ ವಯಸ್ಸಿನಲ್ಲೇ ಮಗುವಿಗೆ ಜನ್ಮ ನೀಡಿದ್ದಾಳೆ ಎಂಬ ಮಾಹಿತಿಯ ಮೇಲೆ ಮತ್ತೊಂದು ಪ್ರಕರಣ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಈ ಬಾಲಕಿಗೆ ಮೊದಲು ಒಂದು ಹೆರಿಗೆಯಾಗಿದೆ. ಈಗ ಮತ್ತೊಮ್ಮೆ ಗರ್ಭಿಣಿಯಾಗಿದ್ದು, ಈ ಎರಡೂ ಪ್ರಕರಣಗಳು ತುಂಬಾ ಗಂಭೀರ ಪ್ರಕರಣಗಳಾಗಿವೆ.

# ಹಾಸನಾಂಬ ಜಾತ್ರೋತ್ಸವ: ದೇವಿಯ ದರ್ಶನಕ್ಕೆ ಆನ್‌ಲೈನ್ ಬುಕ್ಕಿಂಗ್

### ಅ.29ರಿಂದ ನ.11ರವರೆಗೆ ನಡೆಯಲಿರುವ ಹಾಸನಾಂಬ ಜಾತ್ರೋತ್ಸವದಲ್ಲಿ ಈ ಬಾರಿ 20ರಿಂದ 25ಲಕ್ಷ ಭಕ್ತರು ಆಗಮಿಸುವ ಸಾಧ್ಯತೆ ಜಿಲ್ಲಾಡಳಿತದಿಂದ ಕ್ರಮ

**• ಉದಯವಾಹಿನಿ ಹಾಸನ:**

ಈ ಬಾರಿ ಹಾಸನಾಂಬ ದೇವಿ ದರ್ಶನವನ್ನು ಭಕ್ತಾದಿಗಳಿಗೆ ಸುರಕ್ಷಿತ ಹಾಗೂ ಸುಗಮವಾಗಿ ಕಲ್ಪಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಈಗಿನಿಂದಲೇ ಸಿದ್ಧತೆ ಆರಂಭಿಸಿದ್ದು, ತಂತ್ರಜ್ಞಾನದ ಮೊರೆ ಹೋಗಲು ತೀರ್ಮಾನಿಸಿದೆ.

- ಅ.29ರಿಂದ ಹಾಸನಾಂಬ ಜಾತ್ರೋತ್ಸವ
- ತಂತ್ರಜ್ಞಾನ ಮೊರೆ ಹೋದ ಜಿಲ್ಲಾಡಳಿತ
- ಲೈವ್ ಟೆಲಿಕಾಸ್ಟ್ ಮಾಡಲು ಸಿದ್ದತೆ





ಉದಯವಾಹಿನಿ ಚಿತ್ರ

ಹಾಸನಾಂಬ ಜಾತ್ರೋತ್ಸವ ಅ.29ರಿಂದ ನ.11ರವರೆಗೆ ನಡೆಯಲಿದ್ದು, ಪ್ರಥಮ ದಿನ ಅ.29 ಮತ್ತು ಅಂತಿಮ ದಿನ ನ.11 ಹೊರತುಪಡಿಸಿ 11 ದಿನ ಸಾರ್ವಜನಿಕ ದರ್ಶನಕ್ಕೆ ಅವಕಾಶವಿದೆ. ಈ ಬಾರಿಯೂ 20 ರಿಂದ 25 ಲಕ್ಷ ಭಕ್ತರು ಆಗಮಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಸುಗಮ ದರ್ಶನಕ್ಕೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ನಾನಾ ಕ್ರಮಕ್ಕೆ ಜಿಲ್ಲಾಡಳಿತ ಮುಂದಾಗಿದೆ.

ಪ್ರಮುಖವಾಗಿ ಆನ್‌ಲೈನ್‌ನಲ್ಲಿ ನೋಂದಣಿ ಜತೆಗೆ ವೆಬ್‌ಸೈಟ್ ಮೂಲಕ ಮುಂಚಿತವಾಗಿ ದೇಗುಲದ ಬಾಗಿಲು ತೆರೆಯುವ ಹಾಗೂ ಮಧ್ಯಾಹ್ನದ ವೇಳೆ ಪೂಜೆಗಾಗಿ ಮುಚ್ಚುವ ಸಮಯ ಸೇರಿದಂತೆ ಸರತಿ ಸಾಲಿನಲ್ಲಿ ಎಷ್ಟು ಭಕ್ತರು ಇದ್ದಾರೆ? ಈಗ ಸರತಿ ಸಾಲಿನಲ್ಲಿ ನಿಂತರೆ ದರ್ಶನಕ್ಕೆ ಎಷ್ಟು ಸಮಯ ಆಗಬಹುದು? ಎಂಬ ಮಾಹಿತಿಯನ್ನು ತಿಳಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗಿದೆ ಎಂದು ಡಿಸಿ ಲತಾಕುಮಾರಿ ತಿಳಿಸಿದ್ದಾರೆ.

''ಕಡಿಮೆ ಅವಧಿಯಲ್ಲಿ ಲಕ್ಷಾಂತರ ಭಕ್ತಾದಿಗಳಿಗೆ ದೇವಿ ದರ್ಶನ ಮಾಡಿಸುವುದು ಸವಾಲಿನ ಕೆಲಸ. ಆದಾಗ್ಯೂ, ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳ ಸಂಖ್ಯೆಯನ್ನು ನಿಖರವಾಗಿ ಹೇಳಲು ಆಧುನಿಕ ತಂತ್ರಜ್ಞಾನ ಬಳಸಿಕೊಳ್ಳಲಾಗುವುದು. ಇದರಿಂದ ಭಕ್ತರಿಗೆ ಅನುಕೂಲವಾಗಲಿದೆ. ದಟ್ಟಣೆ ಇಲ್ಲದ ವೇಳೆ ಬಂದು ದರ್ಶನದ ಸರತಿ ಸಾಲಿನಲ್ಲಿ ನಿಲ್ಲಲು ಅವಕಾಶವಾಗುತ್ತದೆ ಎನ್ನುತ್ತಾರೆ ಡಿಸಿ.

**ವೆಬ್‌ಸೈಟ್ ಲಾಂಚ್**

ಜಾತ್ರಾ ಮಹೋತ್ಸವ ಪ್ರಯುಕ್ತ ವೆಬ್‌ಸೈಟ್ ತೆರೆಯಲಾಗುವುದು. ದೇವಾಲಯದ ಬಳಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮ ಲೈವ್ ಟೆಲಿಕಾಸ್ಟ್ ಆಗಬೇಕು. ಇದಕ್ಕಾಗಿ ಪ್ರತ್ಯೇಕವಾಗಿ ಒಂದು ಸಮಿತಿ ರಚಿಸಬೇಕು. ಸೌಂಡ್ ಸಿಸ್ಟಮ್‌ನಲ್ಲಿಯಾವುದೇ ಅಡಚಣೆ ಉಂಟಾಗದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಜಿಲ್ಲಾಡಳಿತ ಸೂಚಿಸಿದೆ.

> ಹಾಸನಾಂಬ ಉತ್ಸವಕ್ಕೆ ಈ ಬಾರಿ ನಾಲ್ಕು ತಿಂಗಳ ಮುನ್ನವೇ ಪೂರ್ವಭಾವಿ ಸಭೆ ನಡೆಸಲಾಗಿದೆ. ಹಿಂದಿನ ವರ್ಷದ ಲೋಪ ಮರುಕಳಿಸದಂತೆ ಎಚ್ಚರಿಕೆ ವಹಿಸಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಅವರಿಗೆ ಮುಂಚಿತವಾಗಿ ಆನ್‌ಲೈನ್, ವೆಬ್‌ಸೈಟ್ ಮೂಲಕ ಮಾಹಿತಿ ನೀಡಲಾಗುವುದು.
>
> -ಲತಾಕುಮಾರಿ ಜಿಲ್ಲಾಧಿಕಾರಿ ಹಾಸನ.

ಶ್ರೀ ಹಾಸನಾಂಬ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಕುರಿತು ಪೂರ್ವ ಸಿದ್ಧತಾ ಸಭೆ ನಡೆಸಿದ್ದು, ಪ್ರತಿ ವಾರಕ್ಕೊಮ್ಮೆ ಸಭೆ ನಡೆಸಲು ಜಿಲ್ಲಾಡಳಿತ ನಿರ್ಧರಿಸಿದೆ.

ಕಳೆದ ವರ್ಷ ಭಕ್ತರ ಸರತಿ ಸಾಲಿನಲ್ಲಿ ಬ್ಯಾರಿಕೇಡ್ ಫ್ಲೇಟ್‌ಗಳು ಕಾಲಿಗೆ ತಗುಲಿ ಹಲವರು ಗಾಯಗೊಂಡಿದ್ದರು. ಇದು ಈ ಬಾರಿ ಪುನರಾವರ್ತನೆ ಆಗದಂತೆ ಎಚ್ಚರ ವಹಿಸಲು ಸೂಚಿಸಲಾಗಿದೆ ಎಂದು ಡಿಸಿ ತಿಳಿಸಿದ್ದಾರೆ.

**ಸವಾಲು ಏನು?**

ಹಾಸನಾಂಬ ದೇಗುಲದ ದೇವರ ಗುಡಿ ಬಾಗಿಲು ಕಿರಿದಾಗಿರುವುದೇ ದೊಡ್ಡ ಸವಾಲಾಗಿದೆ. ಒಂದು ಗಂಟೆಗೆ ಎಷ್ಟು ಭಕ್ತರು ದರ್ಶನ ಮಾಡಬಹುದು ಎಂಬ ಲೆಕ್ಕಾಚಾರ ಆಧಾರವಾಗಿಟ್ಟುಕೊಂಡು, ಪ್ರವೇಶ ದ್ವಾರವನ್ನು ಈ ಬಾರಿ ಅತ್ಯಂತ ಆಕರ್ಷಕವಾಗಿ ರೂಪಿಸುವ ಜತೆಗೆ ಪರ್ಯಾಯ ವ್ಯವಸ್ಥೆ ಬಗ್ಗೆಯೂ ಜಿಲ್ಲಾಡಳಿತ ಚಿಂತಿಸಿದೆ.

**ನಾನಾ ಸ್ಪರ್ಧೆ**

ಹಾಸನಾಂಬ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಫಲಪುಷ್ಪ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾವಯವ ಉತ್ಪನ್ನಗಳ ಬಳಕೆಗೆ ಉತ್ತೇಜನ ನೀಡಲು ಸಾವಯವ ಮೇಳ, ಶ್ವಾನ ಪ್ರದರ್ಶನ, ಪಾಕ ಸ್ಪರ್ಧೆ ಏರ್ಪಡಿಸಲು ನಿರ್ಧರಿಸಲಾಗಿದೆ.

**ಗಣ್ಯರಿಗೆ ಸಮಯ**

ಹಿಂದಿನ ವರ್ಷದಂತೆ ಈ ಬಾರಿಯೂ ಗಣ್ಯರಿಗೆ ನಿಗದಿತ ಸಮಯದಲ್ಲಿ ಮಾತ್ರ ಅವಕಾಶದ ಜತೆಗೆ ಇಷ್ಟೇ ಜನ ಬರಬೇಕು ಹಾಗೂ ಜಿಲ್ಲಾಡಳಿತ ಕಲ್ಪಿಸುವ ವಾಹನದಲ್ಲೇ ಬರಬೇಕು ಎಂದು ಎಂಬ ಷರತ್ತು ವಿಧಿಸಲು ನಿರ್ಧರಿಸಿದೆ. ಒಟ್ಟಾರೆ ಈ ಬಾರಿ ಹಾಸನಾಂಬ ಉತ್ಸವಕ್ಕೆ ನಾಲ್ಕು ತಿಂಗಳಿಗೂ ಮುನ್ನವೇ ಜಿಲ್ಲಾಡಳಿತ ಸಿದ್ಧತೆ ಆರಂಭಿಸಿದ್ದು, ಭಕ್ತರಿಗೆ ಎಷ್ಟರ ಮಟ್ಟಿಗೆ ಅನುಕೂಲವಾಗಲಿದೆ ಎಂಬುದನ್ನು ಕಾದು ನೋಡಬೇಕಿದೆ.

## ಗದಗ ನಿವಾಸಿಗಳಿಗೆ ವರದಾನ ಎಸ್‌ಐಆರ್: ವಲಸೆ ನಿವಾಸಿಗಳ ಸಮ್ಮಿಲನ

**• ಉದಯವಾಹಿನಿ ಗದಗ:**

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಗದಗದಲ್ಲಿ 25 ವರ್ಷಗಳ ಬಳಿಕ ಅನೇಕ ವಲಸೆ ನಿವಾಸಿಗಳನ್ನು ಮತ್ತೆ ಒಂದಾಗಿಸಿದೆ. ಹುಡ್ಕೋ ಕಾಲೊನಿ, ರಾಜೀವ್ ಗಾಂಧಿ ನಗರ ಹಾಗೂ ಹಮಾಲ ಕಾಲೊನಿಯ ಮೂಲ ನಿವಾಸಿಗಳು 2002ರ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳ ವಿವರ ಪರಿಶೀಲಿಸಲು ಊರಿಗೆ ಮರಳುತ್ತಿದ್ದು, ಈ ವೇಳೆ ಹಳೆಯ ಸ್ನೇಹಿತರು ಹಾಗೂ ಬಂಧುಗಳನ್ನು ಮತ್ತೆ ಭೇಟಿಯಾಗುತ್ತಿದ್ದಾರೆ. ಹಲವು ನಿವಾಸಿಗಳು ತಮ್ಮ ಹಳೆಯ ಸ್ನೇಹಿತರ ಸಂಪರ್ಕವನ್ನು ಕಳೆದುಕೊಂಡಿದ್ದೇವೆ ಎನ್ನುತ್ತಾರೆ. ಈ ಪ್ರದೇಶಗಳ ಬಹುತೇಕ ಜನರು ದಿನಗೂಲಿ ಕಾರ್ಮಿಕರಾಗಿದ್ದು, 2000ನೇ ಇಸವಿಗೆ ಮೊದಲು ಉದ್ಯೋಗಕ್ಕಾಗಿ ವಿವಿಧ ನಗರಗಳಿಗೆ ವಲಸೆ ಹೋಗಿದ್ದರು. ಈಗ ಎಸ್‌ಐಆರ್ ಪ್ರಕ್ರಿಯೆಯಿಂದ ಊರಿಗೆ ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಹಳೆಯ ನೆನಪುಗಳನ್ನು ಮೆಲುಕು ಹಾಕುವ ಅವಕಾಶ ಸಿಕ್ಕಿರುವುದಕ್ಕೆ ಸಂತಸ ವ್ಯಕ್ತಪಡಿಸುತ್ತಿದ್ದಾರೆ.



ಬೂತ್ ಮಟ್ಟದ ಅಧಿಕಾರಿಗಳು 2002ರ ಮತದಾರರ ಪಟ್ಟಿಗೆ ಪ್ರವೇಶ ಹೊಂದಿದ್ದು, ಆ ಸಮಯದಲ್ಲಿ ಶಾಲೆಗಳು, ಸಮುದಾಯ ಭವನಗಳು ಹಾಗೂ ಇತರ ಸ್ಥಳಗಳಲ್ಲಿ ಸ್ಥಾಪಿಸಿದ್ದ ಮತಗಟ್ಟೆಗಳಲ್ಲಿ ಮತ ಚಲಾಯಿಸಿದ್ದವರ ವಿವರಗಳನ್ನು ಪರಿಶೀಲಿಸುತ್ತಿದ್ದಾರೆ.ರಾಜ್ಯದ ವಿವಿಧ ಭಾಗಗಳಲ್ಲಿ ನೆಲೆಸಿರುವ ಗದಗ ಮೂಲದ ಹಿರಿಯ ನಾಗರಿಕರು 2002ಕ್ಕೂ ಮೊದಲು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಪರಿಶೀಲಿಸಲು ಗದಗಕ್ಕೆ ಆಗಮಿಸುತ್ತಿದ್ದಾರೆ. 2000 ದಶಕದಲ್ಲಿ ಗದಗದಿಂದ ವಲಸೆ ಹೋದವರು ಈಗ ಎಸ್‌ಐಆರ್ ಪ್ರಕ್ರಿಯೆಗಾಗಿ ಲಾಡ್ಜ್‌ಗಳು, ಸಂಬಂಧಿಕರ ಹಾಗೂ ಸ್ನೇಹಿತರ ಮನೆಗಳಲ್ಲಿ ತಂಗಿದ್ದಾರೆ.

> ನಾನು ಫೇಸ್‌ಬುಕ್ ಬಳಸುವುದಿಲ್ಲ. ಆದರೆ ನನ್ನ ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಸುತ್ತಾರೆ. ನನ್ನನ್ನು ಕಂಡ ಅನೇಕರು ಸಂತಸ ವ್ಯಕ್ತಪಡಿಸಿದರು. ಎಸ್‌ಐಆರ್ ಪ್ರಕ್ರಿಯೆ ಹಲವು ಸವಾಲುಗಳನ್ನು ಹೊಂದಿದ್ದರೂ, ನಮ್ಮನ್ನು ಮತ್ತೆ ಒಂದಾಗಿಸಿದೆ ಎಂದು ಹೇಳಿದರು. -ಕುರಹಟ್ಟಿ

ಮೊನ್ನೆ ರಾಜೀವ್ ಗಾಂಧಿ ನಗರದ ನಿವಾಸಿ ಅಬ್ದುಲ್ ಕುರಹಟ್ಟಿ, ಬೂತ್ ಸಂಖ್ಯೆ 8ರ ಸಮೀಪದ ಚಹಾ ಅಂಗಡಿಯಲ್ಲಿ ತನ್ನ ಹಳೆಯ ಸ್ನೇಹಿತರಾದ ರವಿ ಚಿಮ್ಮಳ್, ರವಿ ಗೌಡರ್ ಹಾಗೂ ರಾಗವೇಂದ್ರ, ಗೌಡರ್ ಅವರನ್ನು ಭೇಟಿ ಮಾಡಿ ಹಳೆಯ ದಿನಗಳನ್ನು ನೆನಪಿಸಿಕೊಂಡರು.

## ಮುರುಡೇಶ್ವರ ದೇವಸ್ಥಾನದ ಹೆಸರಲ್ಲಿ ನಕಲಿ ಲಾಟರಿ ದಂಧೆ

**• ಉದಯವಾಹಿನಿ ಕಾರವಾರ:**

ಪ್ರಸಿದ್ಧ ಮುರುಡೇಶ್ವರ ದೇವಸ್ಥಾನದ ಹೆಸರನ್ನು ಬಳಸಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ನಕಲಿ ಲಾಟರಿ ದಂಧೆ ನಡೆಸಿ ಸಾರ್ವಜನಿಕರಿಗೆ ಲಕ್ಷಾಂತರ ರೂಪಾಯಿ ವಂಚಿಸುತ್ತಿದ್ದ ಆರೋಪಿಯನ್ನು ಉತ್ತರ ಕನ್ನಡ ಜಿಲ್ಲೆಯ ಮುರುಡೇಶ್ವರ ಪೊಲೀಸರು ಯಶಸ್ವಿಯಾಗಿ ಬಂಧಿಸಿದ್ದಾರೆ. ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಆಲಿಬೈನಗಾಂವ್ ನಿವಾಸಿಯಾದ ನರಸಿಂಗ್ ತಂದೆ ವೆಂಕಟರಾವ್ ತಗರಬೀಡೆ (32 ವರ್ಷ) ಬಂಧಿತ ಆರೋಪಿಯಾಗಿದ್ದಾನೆ. ಈತ ಹೋಟೆಲ್‌ಕೆಲಸ ಮಾಡಿಕೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ವಂಚನೆ ನಡೆಯುತ್ತಿದ್ದುದು ಹೇಗೆ?: ಆರೋಪಿಯು ಫೇಸ್‌ಬುಕ್ ಮತ್ತು ಇನ್‌ಸ್ಟಾಗ್ರಾಮ್‌ನಲ್ಲಿ ಮುರುಡೇಶ್ವರ ದೇವಸ್ಥಾನದ ಅಧ್ಯಕ್ಷ ಹೆಸರಿನಲ್ಲಿ ನಕಲಿ ಖಾತೆಗಳನ್ನು ತೆರೆದಿದ್ದನು. ದೇವಸ್ಥಾನದ ಫೋಟೋಗಳನ್ನು ಬಳಸಿಕೊಂಡು ಕೇವಲ 299ಕ್ಕೆ ಕಾರು, ಜೆಸಿಬಿ, ಬೈಕ್‌ಗಳು ಸೇರಿದಂತೆ ಭಾರಿ ಉಡುಗೊರೆಗಳನ್ನು ನೀಡುವ ಲಕ್ಕಿ ಡ್ರಾ ಪಾಂಪ್ಲೆಟ್‌ಗಳನ್ನು ಸೃಷ್ಟಿಸಿ ಹರಿಬಿಡುತ್ತಿದ್ದನು. ಇದನ್ನು ನಿಜವೆಂದು ನಂಬಿದ ಸಾರ್ವಜನಿಕರಿಂದ ಆನ್‌ಲೈನ್ ಮೂಲಕ ಹಣವನ್ನು ವರ್ಗಾಯಿಸಿಕೊಂಡು ವಂಚನೆ ಎಸಗುತ್ತಿದ್ದ.

## ಶಿಲಾಯುಗದ ಮಾನವ ವಾಸಕ್ಕೆ ಹೊಸ ಪುರಾವೆ

**• ಉದಯವಾಹಿನಿ ಬಳ್ಳಾರಿ:**



ಉದಯವಾಹಿನಿ ಚಿತ್ರ

ಕರ್ನಾಟಕದ ಪುರಾತತ್ವ ಇತಿಹಾಸದಲ್ಲಿ ಮತ್ತೊಂದು ಸುವರ್ಣ ಅಧ್ಯಾಯ ಬರೆಯಲಾಗಿದೆ. ಬಳ್ಳಾರಿ ಜಿಲ್ಲೆಯ ಪ್ರಸಿದ್ಧ ಸಂಡೂರು ಅರಣ್ಯ ಪ್ರದೇಶದಲ್ಲಿರುವ ಗುಹೆಯು ಭಾರತದಲ್ಲೇ ಅತ್ಯಂತ ಹಳೆಯ ಎತ್ತರದ ಪ್ರದೇಶದ ಮಾನವ ವಾಸಸ್ಥಾನ ಎಂಬುದು ಈಗ ವೈಜ್ಞಾನಿಕವಾಗಿ ಸಾಬೀತಾಗಿದೆ.

ಅಹಮದಾಬಾದ್‌ನ ಫಿಸಿಕಲ್ ರಿಸರ್ಚ್ ಲ್ಯಾಬೊರೇಟರಿ ಮತ್ತು ಐಐಟಿ ಗಾಂಧಿನಗರದ ಪುರಾತತ್ವ ವಿಜ್ಞಾನ ಕೇಂದ್ರ ಜಂಟಿಯಾಗಿ ನಡೆಸಿದ ಕಾರ್ಬನ್ ಡೇಟಿಂಗ್ ಪರೀಕ್ಷೆಯ ವರದಿಯಲ್ಲಿ ಈ ಮಹತ್ವದ ವಿಷಯ ಬಹಿರಂಗವಾಗಿದೆ.

ಸಮುದ್ರ ಮಟ್ಟದಿಂದ 850 ಮೀಟರ್ ಎತ್ತರದಲ್ಲಿರುವ 'ರಶೀದ್ ಪಡಿ' ಗುಹೆ ಸುಮಾರು 10,000 ವರ್ಷಗಳಷ್ಟು ಹಳೆಯ ಮಾನವ ವಾಸಸ್ಥಳ ಎಂಬುದನ್ನು ಕಾರ್ಬನ್ ಡೇಟಿಂಗ್ ಪರೀಕ್ಷೆ ದೃಢಪಡಿಸಿದೆ. ಈ ಮೂಲಕ ಇದು ಭಾರತದಲ್ಲೇ ಅತಿ ಎತ್ತರದಲ್ಲಿರುವ ಶಿಲಾಯುಗದ ಮಾನವ ವಾಸಸ್ಥಳ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಗುಹೆಯ ನೆಲಭಾಗದಿಂದ ಪತ್ತೆಯಾದ ಸೂಕ್ಷ್ಮ ಕಲ್ಲಿನ ಉಪಕರಣ ಹಾಗೂ ಮಾನವ ಮೂಳೆಯ ತುಣುಕಿನ ಮೇಲ್ಮೈ ವಸ್ತುಗಳ ಮೇಲೆ ಅಹಮದಾಬಾದ್‌ನ ಫಿಸಿಕಲ್ ರಿಸರ್ಚ್ ಲ್ಯಾಬೊರೇಟರಿ ಹಾಗೂ ಐಐಟಿ ಗಾಂಧಿನಗರದ ಪುರಾತತ್ವ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಕಾರ್ಬನ್ ಡೇಟಿಂಗ್ ನಡೆಸಲಾಯಿತು.

ಈ ಪರೀಕ್ಷೆಯ ಫಲಿತಾಂಶದಲ್ಲಿ, ಗುಹೆಯಲ್ಲಿ ಮಾನವ ವಾಸವಿದ್ದದ್ದು ಸುಮಾರು 10 ಸಾವಿರ ವರ್ಷಗಳ ಹಿಂದೆ ಎಂಬುದು ದೃಢಪಟ್ಟಿದೆ. ಖ್ಯಾತ ಪುರಾತತ್ವ ತಜ್ಞ ಡಾ. ರವಿ ಕೊರಿಸೆಟ್ಟರ್ ಅವರ ನೇತೃತ್ವದಲ್ಲಿ ನಡೆದ ಈ ಅಧ್ಯಯನವು, ದಕ್ಷಿಣ ಭಾರತದ ಶಿಲಾಯುಗದ ಮಾನವ ಜೀವನದ ಕುರಿತ ಸಂಶೋಧನೆಗೆ ಮಹತ್ವದ ತಿರುವು ನೀಡಿದೆ.

> 'ರಶೀದ್ ಪಡಿ' ಎಂದು ಕರೆಯಲ್ಪಡುವ ಈ ಗುಹೆಯನ್ನು 2024ರಲ್ಲಿ ಪರಿಸರವಾದಿ ಸಮದ್ ಕೊಟ್ಟೂರು, ಬಳ್ಳಾರಿ ಹೆರಿಟೇಜ್ ಟ್ರಸ್ಟ್ ಹಾಗೂ ರಾಬರ್ಟ್ ಬ್ರೂಸ್ ಫೂಟ್ ಸಂಗನಕಲ್ಲು ಪುರಾತತ್ವ ಸಂಗ್ರಹಾಲಯದ ಸಹಯೋಗದೊಂದಿಗೆ ಗುರುತಿಸಲಾಗಿತ್ತು. ಇದಾದ ಬಳಿಕ ನಡೆದ ವೈಜ್ಞಾನಿಕ ಅಧ್ಯಯನಗಳೇ ಈಗ ಈ ಐತಿಹಾಸಿಕ ಮಹತ್ವವನ್ನು ದೃಢಪಡಿಸಿವೆ.

## ಹೆಚ್ಚುತ್ತಿರುವ ಬರ ಪರಿಸ್ಥಿತಿ; ಮೇವಿನ ಕೊರತೆ ಆತಂಕ

**• ಉದಯವಾಹಿನಿ ಚಿತ್ರದುರ್ಗ:**

ಮಧ್ಯ ಕರ್ನಾಟಕದಾದ್ಯಂತ ಬರ ಪರಿಸ್ಥಿತಿ ಹೆಚ್ಚುತ್ತಿದೆ, ಜೊತೆಗೆ ಉತ್ತಮ ಮಾನ್ಸೂನ್ ನಿರೀಕ್ಷೆಯಲ್ಲಿ ತಮ್ಮ ಭೂಮಿಯನ್ನು ಉಳುಮೆ ಮಾಡಲು ಎತ್ತುಗಳನ್ನು ಖರೀದಿಸಿದ ಚಿತ್ರದುರ್ಗದ ರೈತರು, ಈಗ ನೀರು ಮತ್ತು ಮೇವಿನ ತೀವ್ರ ಕೊರತೆಯ ಭಯದಿಂದ ಅವುಗಳನ್ನು ನಷ್ಟದಲ್ಲಿ ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದಾರೆ. ಎತ್ತುಗಳನ್ನು ಖರೀದಿಸುವುದು ಮತ್ತು ಮಾರಾಟ ಮಾಡುವುದು ಈ ಪ್ರದೇಶದ ಕೃಷಿ ಋತುವಿನ ಸಾಮಾನ್ಯ ಲಕ್ಷಣವಾಗಿದೆ.

ಮಳೆಯಾಗುವ ನಿರೀಕ್ಷೆಯಿಂದ, ಅನೇಕ ರೈತರು ಮೇ ಮತ್ತು ಜೂನ್ ಮೊದಲ ಹದಿನೈದು ದಿನಗಳಲ್ಲಿ ಚಿತ್ರದುರ್ಗದ ಜಾನುವಾರು ಮಾರುಕಟ್ಟೆಯಲ್ಲಿ 'ಹೋರಿ' ಗಳನ್ನು, ವಿಶೇಷವಾಗಿ ಅಮೃತಮಹಲ್ ತಳಿಯನ್ನು ಖರೀದಿಸಿದರು.

ಆದಾಗ್ಯೂ, ಮಳೆ ಕೊರತೆಯಿಂದಾಗಿ ಪ್ರಾಣಿಗಳನ್ನು ಉಳಿಸಿಕೊಳ್ಳಲು ಅವರಿಗೆ ಸಾಧನವಿಲ್ಲ. ಪರಿಣಾಮವಾಗಿ, ಅನೇಕರು ಎತ್ತುಗಳನ್ನು ಖರೀದಿಸಿದ್ದಕ್ಕಿಂತ ಕಡಿಮೆ ಬೆಲೆಗೆ ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದಾರೆ. ಆದರೆ ಮಾರುಕಟ್ಟೆಯಲ್ಲಿ ಕೆಲವೇ ಖರೀದಿದಾರರು ಇರುವುದರಿಂದ, ಹೆಚ್ಚಿನವರು ಜಾನುವಾರುಗಳನ್ನು ಮಾರಾಟ ಮಾಡದೆ ತಮ್ಮ ಹಳ್ಳಿಗಳಿಗೆ ಮರಳುತ್ತಿದ್ದಾರೆ.



ಉದಯವಾಹಿನಿ ಚಿತ್ರ

ಕರ್ನಾಟಕ ರೈತರು ಬರ ಉಲ್ಬಣಗೊಳ್ಳುವ ಮೊದಲು ಜಾನುವಾರುಗಳನ್ನು ಮಾರಾಟ ಮಾಡಲು ಪರದಾಡುತ್ತಿದ್ದಾರೆ.

ಹಿಂದಿನ ಬರಗಾಲದ ಸಮಯದಲ್ಲಿ ಅವರು ಎದುರಿಸಿದ ಕಷ್ಟಗಳನ್ನು ನೆನಪಿಸಿಕೊಳ್ಳುತ್ತಾ, ಬರ ಉಲ್ಬಣಗೊಳ್ಳುವ ಮೊದಲು ತಮ್ಮ ಜಾನುವಾರುಗಳನ್ನು ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದೇವೆ ಎಂದು ರೈತರು ಹೇಳುತ್ತಾರೆ.

> ಪ್ರಾಥಮಿಕ ಅಂದಾಜಿನ ಪ್ರಕಾರ, ಲಭ್ಯವಿರುವ ಮೇವಿನ ದಾಸ್ತಾನು ಸುಮಾರು 26 ವಾರಗಳವರೆಗೆ ಜಾನುವಾರುಗಳ ಅಗತ್ಯಗಳನ್ನು ಪೂರೈಸುತ್ತದೆ. ರಬಿ ಮಳೆ ಬಂದರೆ, ಕುಡಿಯುವ ನೀರು ಮತ್ತು ಮೇವಿನ ಪರಿಸ್ಥಿತಿ ಸುಧಾರಿಸುತ್ತದೆ ಎಂದು ಹೇಳಿದರು.
>
> - ಉಪ ನಿರ್ದೇಶಕ ಡಾ. ತಿಪ್ಪೇಸ್ವಾಮಿ ಹೇಳಿದರು.

## ಬಿಜೆಪಿ ಪದಾಧಿಕಾರಿಗಳ ಆಯ್ಕೆ: ವಿಜಯೇಂದ್ರ ವಿರುದ್ಧ ಸಿದ್ದೇಶ್ವರ್ ಅಸಮಾಧಾನ

**• ಉದಯವಾಹಿನಿ ದಾವಣಗೆರೆ:**

ನಮ್ಮನ್ನು ಕೇಳದೆಯೇ ಜಿಲ್ಲಾ ಬಿಜೆಪಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿಂದು ಮಾತನಾಡಿದ ಅವರು, ಮೊನ್ನೆ ಬಿಡುಗಡೆ ಮಾಡಿದ ಜಿಲ್ಲಾ ಬಿಜೆಪಿ ಪದಾಧಿಕಾರಿಗಳ ಪಟ್ಟಿ ಬಗ್ಗೆ ಕಾರ್ಯಕರ್ತರು ಬೇಸರ ವ್ಯಕ್ತಪಡಿಸಿದ್ದಾರೆ. ಇದರಿಂದಾಗಿ ಪಟ್ಟಿ ಬದಲಾವಣೆ ಮಾಡಿ ಎಂದು ರಾಜ್ಯಾಧ್ಯಕ್ಷರ ಗಮನಕ್ಕೆ ತರುತ್ತೇವೆ. ಬದಲಾವಣೆ ಮಾಡದೇ ಇದ್ದರೆ ಮುಂದೆ ಚರ್ಚೆ ಮಾಡುತ್ತೇವೆ. ಜಿಲ್ಲಾ ಕಮಿಟಿ ಮಾಡುತ್ತಿರುವುದನ್ನು ನಮ್ಮ ಗಮನಕ್ಕೆ ತಂದಿಲ್ಲ. ನಮ್ಮನ್ನು ಹಿರಿಯ ನಾಯಕರು ಎಂದು ಇಲ್ಲಿಯವರೇ ಹೇಳ್ತಾರೆ ಅಷ್ಟೇ, ರಾಜ್ಯಾಧ್ಯಕ್ಷರ ಕಣ್ಣಿಗೆ ನಾನು



ಉದಯವಾಹಿನಿ ಚಿತ್ರ

ಕುಳ್ಳ (ಸಣ್ಣವನು). ರಾಜ್ಯಾಧ್ಯಕ್ಷರು ಜಿಲ್ಲಾ ನಾಯಕರಿಗೆ ಹಾರ್ಟ್ ಇಲ್ಲ ಎಂದು ಹೇಳಿದ್ದರು. ನಾನೇ ಹೇಳುತ್ತೇನೆ ಮೊದಲು ರಾಜ್ಯಾಧ್ಯಕ್ಷರಿಗೆ ಹಾರ್ಟ್ ಇಲ್ಲ. ಇದಕ್ಕಿಂತ ಏನು ಹೇಳೋದಿಲ್ಲ, ಅವರೇ ಅರ್ಥ ಮಾಡಿಕೊಳ್ಳಲಿ ಎಂದರು.

ನಾವು ಮಾಡಿದ್ದ ಪ್ರಧಾನ ಕಾರ್ಯದರ್ಶಿಗಳನ್ನು ಏಕೆ ತೆಗೆದರು ಎನ್ನುವುದು ಗೊತ್ತಾಗಬೇಕಿದೆ. ಮೂರು ತಿಂಗಳಿಗೆ ಪ್ರಧಾನ ಕಾರ್ಯದರ್ಶಿಗಳನ್ನು ತೆಗೆದರೆ ಅದರ ಅರ್ಥ ಏನು?. ಹೀಗೆ ಮಾಡಿದರೆ ನಾವು ಕಾರ್ಯಕರ್ತರಿಗೆ ಮತ್ತು ಜನರಿಗೆ ಏನು ಉತ್ತರ ಕೊಡಬೇಕು?. ರಾಜ್ಯಾಧ್ಯಕ್ಷರೇ ಇದಕ್ಕೆಲ್ಲ ಉತ್ತರ ಕೊಡಬೇಕು ಎಂದು ಹೇಳಿದರು.

ನಾನು ರಾಜ್ಯಾಧ್ಯಕ್ಷರಿಗೆ ಕರೆ ಮಾಡಿ ಮಾತನಾಡಿದರೆ ಇವತ್ತು ಅಮವಾಸ್ಯೆ ಇದೆ ಮಾತಾಡೋದು ಬೇಡಾ ಅಂತ ಹಾಗೆಯೇ ಇಟ್ಟರು. ಹಿಂದಿರುವ ಜಿಲ್ಲಾಧ್ಯಕ್ಷರ ಬದಲಾವಣೆ ಮಾಡಿ ಎಂದು ನಾವು ಹೇಳಿರಲಿಲ್ಲ. ಈಗ ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡಿದಾಗಲೂ ಕೂಡ ನಮಗೆ ಒಂದು ಮಾತು ತಿಳಿಸಿಲ್ಲ.

ಜಿಲ್ಲಾ ಉಸ್ತುವಾರಿ ಪ್ರೀತಂ ಗೌಡ ಅವರಿಗೆ ನಾನು ಒಂದು ಲಿಸ್ಟ್ ಕೊಟ್ಟು ಬಂದಿದ್ದೆ. ಇದರಲ್ಲಿ 70% ಜನರನ್ನು ಆಯ್ಕೆ ಮಾಡುತ್ತೇವೆ ಎಂದು ಹೇಳಿದ್ದರು. ರಿಸೀವ್ ಮಾಡ್ತಿಲ್ಲ ಎಂದು ಪ್ರೀತಂಗೌಡ ವಿರುದ್ಧ ಅಸಮಾಧಾನ ಹೊರ ಹಾಕಿದರು.

## ಅಮೃತ ಭಾರತ್ ನಿಲ್ದಾಣಗಳಿಗೆ ಪ್ರಧಾನಿ ಮೋದಿ ಚಾಲನೆ

**• ಉದಯವಾಹಿನಿ ಹುಬ್ಬಳ್ಳಿ:**

ಅಮೃತ ಭಾರತ್ ನಿಲ್ದಾಣ ಯೋಜನೆಯಡಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಶುಕ್ರವಾರ ದೇಶಾದ್ಯಂತ ನವೀಕರಿಸಲಾದ 75 ರೈಲು ನಿಲ್ದಾಣಗಳನ್ನು ವರ್ಚುವಲ್ ಮಾಧ್ಯಮದ ಮೂಲಕ ಉದ್ಘಾಟಿಸಲಿದ್ದಾರೆ.

ಈ ಪೈಕಿ ಕರ್ನಾಟಕದ ಅಳ್ನಾವರ (17.2 ಕೋಟಿ ರೂ.), ಬಾದಾಮಿ (15.10 ಕೋಟಿ ರೂ.), ಬಂಟ್ವಾಳ (26.18 ಕೋಟಿ ರೂ.) ಹಾಗೂ ಕೊಪ್ಪಳ (21.14 ಕೋಟಿ ರೂ.) ನಿಲ್ದಾಣಗಳನ್ನು ಆಧುನಿಕ ಸೌಲಭ್ಯಗಳೊಂದಿಗೆ ಸಮಗ್ರವಾಗಿ ಅಭಿವೃದ್ಧಿಪಡಿಸಲಾಗಿದೆ.

ಇದಕ್ಕೂ ಮುನ್ನ 2023-24ರಲ್ಲಿ, ಪ್ರಧಾನ ಮಂತ್ರಿಯವರು ದೇಶಾದ್ಯಂತ 1,000ಕ್ಕೂ ಹೆಚ್ಚು ನಿಲ್ದಾಣಗಳ ಪುನರಾಭಿವೃದ್ಧಿಗೆ ಶಂಕುಸ್ಥಾಪನೆ ನೆರವೇರಿಸಿದ್ದರು.

ಈ ಪೈಕಿ ಕರ್ನಾಟಕದ ಗದಗ, ಧಾರವಾಡ, ಗೋಕಾಕ್ ರೋಡ್, ಮುನಿರಾಬಾದ್ ಮತ್ತು ಬಾಗಲಕೋಟೆ ನಿಲ್ದಾಣಗಳನ್ನು ಮೇ 2025ರಲ್ಲಿ ಉದ್ಘಾಟಿಸಲಾಗಿತ್ತು.

# 15 ದಿನಗಳೇ ಆದ್ರೂ ಇನ್ನೂ ಟೇಕಾಫ್ ಆಗಿಲ್ಲ ವಿಬಿ ಜಿ ರಾಮ್ ಜಿ ಯೋಜನೆ

### ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯಡಿ ಇದುವರೆಗೆ 15,092 ಸಂಗ್ರಹಿಸಲಾಗದ ಗಣತಿ ನಮೂನೆಗಳು ಎಂದು ಗುರುತಿಸಲಾಗಿದೆ.

**• ಉದಯವಾಹಿನಿ ಬಳ್ಳಾರಿ:**

ಗ್ರಾಮೀಣ ಭಾಗದ ಜನತೆಗೆ ಸ್ಥಳೀಯವಾಗಿ ಉದ್ಯೋಗ ಒದಗಿಸುವುದರೊಂದಿಗೆ, ಗ್ರಾಮಗಳ ಅಭಿವೃದ್ಧಿಗೆ ಸಹಕಾರಿಯಾಗಿದ್ದ ಮನರೇಗಾ ಬದಲಾದ ಹೆಸರಿನೊಂದಿಗೆ ' ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆ (ವಿಜಿ ಜಿ ರಾಮ್ ಜಿ) ಅಧಿಕೃತವಾಗಿ ಅನುಷ್ಠಾನಗೊಂಡು 15 ದಿನ ಕಳೆದರೂ, ಜಿಲ್ಲೆಯಲ್ಲಿ ಈವರೆಗೆ ಟೇಕಾಫ್ ಆಗದೆ ಯೋಜನೆಗೆ ಹಿನ್ನಡೆಯಾಗಿದೆ.

- ವಿಬಿ ಜಿ ರಾಮ್ ಜಿ ಯೋಜನೆ
- 125 ದಿನಗಳವರೆಗೆ ಉದ್ಯೋಗಾವಕಾಶ
- ಜಿಲ್ಲೆಯಲ್ಲಿ ಎದುರಾದ ಬರದ ಛಾಯೆ

ಜಿಲ್ಲೆಯ ಐದು ತಾಲ್ಲೂಕುಗಳಲ್ಲಿ ಒಟ್ಟು 100 ಗ್ರಾಪಂಗಳಿದ್ದು, ಪ್ರತಿಯೊಂದು ತಾಲ್ಲೂಕುಗಳಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಕಾಮಗಾರಿಗಳ ಕ್ರಿಯಾಯೋಜನೆ ಸಿದ್ಧಪಡಿಸಿ ಮಾನವ ದಿನಗಳ ಸೃಜನೆಗೆ ಗುರಿ ಹೊಂದಲಾಗಿದೆ. ಜಿಲ್ಲೆಗೆ ಏಪ್ರಿಲ್‌ನಿಂದ ಜೂನ್ ಅಂತ್ಯದವರೆಗೆ ಮನರೇಗಾ ಯೋಜನೆಯಡಿ 35.10ಲಕ್ಷ ಮಾನವದಿನಗಳ ಸೃಜನೆ ಗುರಿಯೊಂದಿಗೆ ಗ್ರಾಮೀಣ ಭಾಗದಲ್ಲಿ ಮನರೇಗಾದಡಿ 16.43ಲಕ್ಷ ಮಾನವ ದಿನಗಳನ್ನು ಸೃಜಿಸಲಾಗಿತ್ತು.

ಇದಾದ ಬಳಿಕ, ಜು.1ರಿಂದ ಅಧಿಕೃತವಾಗಿ ವಿಬಿ ಜಿ ರಾಮ್ ಜಿ ಜಾರಿಗೊಂಡಿದೆ. ಈ ಯೋಜನೆಯಡಿ ಕೂಲಿಕಾರರ ದಿನಗೂಲಿ ಮೊತ್ತವನ್ನು 370ರೂ. ನಿಂದ 382ರೂ.ಗೆ ಏರಿಕೆ ಮಾಡಲಾಗಿದೆ. ಪ್ರತಿ ಕುಟುಂಬಕ್ಕೆ ವರ್ಷಕ್ಕೆ ನೀಡಲಾಗುತ್ತಿದ್ದ



ಉದಯವಾಹಿನಿ ಚಿತ್ರ

100 ದಿನಗಳ ಉದ್ಯೋಗದ ಬದಲಾಗಿ, ಇನ್ಮುಂದೆ 125 ದಿನಗಳವರೆಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ. ಆದರೆ, ಬದಲಾದ ಹೆಸರಿನೊಂದಿಗೆ ಅನುಷ್ಠಾನಗೊಂಡಿರುವ ವಿಬಿ ಜಿ ರಾಮ್ ಜಿ ಯೋಜನೆಯಡಿ ಜಿಲ್ಲೆಯಲ್ಲಿ ಈವರೆಗೂ ಕಾಮಗಾರಿ ಕೈಗೆತ್ತಿಕೊಳ್ಳದಿರುವುದು, ಮಾನವ ದಿನಗಳು ಸೃಜನೆಯಾಗದಿರುವುದು ವಿಪರ್ಯಾಸವಾಗಿದೆ.

**ಜಿಲ್ಲೆಯಲ್ಲಿ ಎದುರಾದ ಬರದ ಛಾಯೆ**

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆಯಿಲ್ಲದೆ, ಜಲಾಶಯದಲ್ಲಿ ನೀರಿಲ್ಲದೆ ಮಳೆಯಾಶ್ರಿತ, ನೀರಾವರಿ ಆಶ್ರಿತ ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳು ಸಂಪೂರ್ಣ ಮಂಕಾಗಿದ್ದು, ಬರದದ ಛಾಯೆ ಎದುರಾಗಿದೆ. ಇದರಿಂದಾಗಿ, ಗ್ರಾಮೀಣ ಭಾಗದ ಜನತೆ ನಿತ್ಯ ಕೂಲಿ ಕೆಲಸಕ್ಕಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹಲವೆಡೆ ಉದ್ಯೋಗವಿಲ್ಲದೆ ನಗರ ಪ್ರದೇಶಗಳತ್ತ ಜನತೆ ಮುಖಮಾಡುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಉದ್ಯೋಗಕ್ಕಾಗಿ ಎದುರು ನೋಡುತ್ತಿರುವ ಜನತೆಗೆ ಜಿಲ್ಲೆಯ ಗ್ರಾಪಂಗಳಿಂದ ಸಮರ್ಪಕವಾಗಿ ಯೋಜನೆ ಜಾರಿಯಾಗಿಲ್ಲ. ಇದರಿಂದ ಜಿಲ್ಲೆಯ ಜನತೆ ವಂಚಿತರಾಗುವಂತಾಗಿದೆ. ಜನರ ಸಂಕಷ್ಟಕ್ಕೆ ಆಸರೆಯಾಗದಬೇಕಿದ್ದ ಯೋಜನೆ ಅನುಷ್ಠಾನಾಧಿಕಾರಿಗಳ ನಿರ್ಲಕ್ಷ್ಯದಿಂದ ಆರಂಭದಲ್ಲಿಯೇ ನೆಲಕಚ್ಚುವಂತಾಗಿದೆ ಎಂಬುವುದು ಹಲವರ ಆರೋಪವಾಗಿದೆ.

> ಜಿಲ್ಲೆಯಲ್ಲಿ ಮನರೇಗಾ ಯೋಜನೆಯಡಿ ನಿತ್ಯ 40 ಸಾವಿರ ಜನ ಉದ್ಯೋಗದಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆ. ಮನರೇಗಾದಡಿ ಬಾಕಿ ಇರುವ ಕಾಮಗಾರಿಗಳು ಪೂರ್ಣಗೊಂಡ ಬಳಿಕ ವಿಬಿ ಜಿ ರಾಮ್ ಜಿ ಯೋಜನೆ ಕೈಗೆತ್ತಿಕೊಳ್ಳಲಾಗುತ್ತದೆ. ವಿಬಿ ಜಿ ರಾಮ್ ಜಿ ಯೋಜನೆಯಡಿ ಜಿಲ್ಲೆಯ 100 ಗ್ರಾಪಂಗಳಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳ ಸಿದ್ಧತೆ ನಡೆಸಿದ್ದು, ಅನುಮೋದನೆ ದೊರಕಿದೆ.
>
> - ಮಹಮ್ಮದ್ ಹಾರೀಸ್ ಸುಮೇರ್ ಸಿಇಒ, ಜಿಪಂ,

**ಯೋಜನೆಯಡಿ ಜಲ ಭದ್ರತೆ,**

ಜಿಲ್ಲೆಯಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಜಲ ಭದ್ರತೆ, ಗ್ರಾಮೀಣ ಮೂಲ ಸೌಕರ್ಯ, ಜೀವನೋಪಾಯ ಮತ್ತು ಹವಾಮಾನ ಸ್ಥಿತಿ ಸ್ಥಾಪಕತ್ವ ಸೇರಿದಂತೆ ಒಟ್ಟು 318 ಕಾಮಗಾರಿ ಕೈಗೆತ್ತಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅದರಡಿ ಈಗಾಗಲೇ ಜಿಲ್ಲೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ 2 ಸಾವಿರ ಕಾಮಗಾರಿಗಳನ್ನು ಹಾಗೂ ಮುಂದಿನ ದಿನಗಳಲ್ಲಿ ಸುಮಾರು 8 ಸಾವಿರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ.

> ಜಿಲ್ಲೆಯಲ್ಲಿ ಮಳೆ ಕೊರತೆಯಿಂದಾಗಿ ಬರಗಾಲ ಎದುರಾಗಿದೆ. ಕೃಷಿ ಚಟುವಟಿಕೆಗಳಿಲ್ಲದೆ ರೈತರು, ದಿನಗೂಲಿ ನೌಕರರು ಜೀವನ ನಿರ್ವಹಣೆಗೂ ತೀವ್ರ ಸಂಕಷ್ಟಪಡುವಂತಾಗಿದೆ. ಇಂತಹ ಪರಿಸ್ಥಿತಿಯಲ್ಲಿ ವಿಬಿ ಜಿ ರಾಮ್ ಜಿ ಕೂಡಲೇ ಜಾರಿಗೊಳಿಸಿ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಿ ಉದ್ಯೋಗ ಖಾತ್ರಿ ಅಡಿ ಜನತೆಗೆ ಉದ್ಯೋಗ ಒದಗಿಸುವ ಮೂಲಕ ಜೀವನಕ್ಕೆ ಭದ್ರತೆ ನೀಡಬೇಕು. ಜಿಲ್ಲೆಯ ಜನ ಗುಳೆ ಹೋಗುವುದನ್ನು ತಡೆಯಬೇಕು.
>
> - ಗೋವಿಂದ, ಜಿಲ್ಲಾಧ್ಯಕ್ಷ, ಅಖಿಲ ಭಾರತ ರೈತ ಕೃಷಿ ಕಾರ್ಮಿಕ ಸಂಘ, ಬಳ್ಳಾರಿ.